# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಸಾಗರವ ದಾಟಲು ದೋಣಿ ಬೇಕು
● ದೋಣಿಯ ಸಾಗಿಸಲು ನಾವಿಕ ಬೇಕು..
ಮೋಡವ ಸರಿಸಲು ಸೂರ್ಯ ಬೇಕು
● ಸೂರ್ಯನ ಕಿರಣಗಳು ಪಸರಿಸಲೇಬೇಕು
ಲೋಕ ಉಳಿಯಲು ಪ್ರಕೃತಿ ಬೇಕು
● ಪ್ರಕೃತಿಯ ಉಳಿಸಲು ಎಲ್ಲರು ಪ್ರಯತ್ನಿಸಬೇಕು..
ಉಪಕಾರ ಮಾಡಲು ಮನಸ್ಸು ಬೇಕು
● ಮನಸ್ಸನ್ನು ಕ್ರೋಢೀಕರಿಸಲು ಮಾನವನಾಗಬೇಕು..
ಮಾನವನಾಗಲು ಭಗವಂತನ ಕೃಪೆ ಬೇಕು
● ಭಗವಂತನ ಒಲಿಸಲು ನಾಮಸ್ಮರಣೆ ಮಾಡಬೇಕು..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 20-02-2026 to 26-02-2026 ಬೆಲೆ:10-00 ಸಂಪುಟ–1 ಸಂಚಿಕೆ–21 ಪುಟಗಳು–6






ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ಮತ್ತು ಬಂಡೀಪುರ ರಾಷ್ಟ್ರೀಯ ಉದ್ಯಾನವನಗಳಲ್ಲಿ ಸುಮಾರು 100 ದಿನಗಳ ನಂತರ ಸಫಾರಿ ಮರು ಪ್ರಾರಂಭವಾಗಿದ್ದು, ಹುಲಿ ಮತ್ತು ಚಿರತೆ ದಾಳಿಗಳ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಸ್ಥಗಿತಗೊಂಡಿದ್ದ ಸಫಾರಿಯನ್ನು 50 ಶೇಕಡಾ ಸಾಮರ್ಥ್ಯದಲ್ಲಿ ಹಾಗೂ ಕಡಿತ ಅವಧಿಯಲ್ಲಿ ಮರು ಪ್ರಾರಂಭಿಸಲು ಸರಕಾರ ತೀರ್ಮಾನಿಸಿದೆ. ಪ್ರಾಣಿ ಪ್ರೀಯರಿಗೆ ಇದು ಸಂತಸದ ಸುದ್ದಿಯಾದರೂ ಸಫಾರಿಯ ಸಮಯವನ್ನು ವಿಚಾರಿಸಿ ಪ್ರಯಾಣ ಬೆಳೆಸುವುದು ಉತ್ತಮ

## ಭಾರತ ಕೇವಲ ಎಐ ಕ್ರಾಂತಿಯ ಭಾಗವಲ್ಲ: ಪ್ರಧಾನಿ ಮೋದಿ



**ನವದೆಹಲಿ:** ಭಾರತ ಹೊಸ ತಂತ್ರ ಜ್ಞಾನವನ್ನು ನಿರ್ಮಿಸುವುದು ಮಾತ್ರವಲ್ಲ, ಅದನ್ನು ಜಾಗತಿಕ ಸವಾಲುಗಳನ್ನು ನಿವಾರಿಸಲು ತ್ವರಿತವಾಗಿ ಅಳವಡಿಸಿಕೊಳ್ಳುತ್ತಿದೆ. ಮಾನವ ಇತಿಹಾಸದಲ್ಲಿ ಕೃತಕ ಬುದ್ಧಿಮತ್ತೆ ಪರಿವರ್ತನಾ ಅಧ್ಯಾಯವಾಗಿ ಗುರುತಾಗಿದೆ. ಭಾರತ ಕೇವಲ ಎಐ ಕ್ರಾಂತಿಯ ಭಾಗವಲ್ಲ, ಬದಲಾಗಿ ಅದನ್ನು ಮುನ್ನಡೆಸುತ್ತಿದೆ. ಕೃತಕ ಬುದ್ಧಿಮತ್ತೆಯನ್ನು ಪ್ರಜಾಪ್ರಭುತ್ವಗೊಳಿಸಬೇಕು. ಇದರ ಸೇರ್ಪಡೆ ಮತ್ತು ಸಬಲೀಕರಣ ವಿಶೇಷವಾಗಿ "ಜಾಗತಿಕ ದಕ್ಷಿಣ"ಕ್ಕೆ ಒಂದು ಸಾಧನವಾಗಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. "ಭಾರತ್ ಎಐ ಇಂಪ್ಯಾಕ್ಟ್" **3ನೇ ಪುಟಕ್ಕೆ**

## ದಲಿತರನ್ನು ಯಾಕೆ ಮುಖ್ಯಮಂತ್ರಿ ಮಾಡಬಾರದು: ಕೆ.ಎನ್. ರಾಜಣ್ಣ




**ತುಮಕೂರು:** ಪವರ್ ಷೇರಿಂಗ್ ದೊಂಬರಾಟದ ನಡುವೆ ಮಾಜಿ ಸಚಿವ ಕೆ.ಎನ್. ರಾಜಣ್ಣ ಮತ್ತೊಮ್ಮೆ "ಕರ್ನಾಟಕದಲ್ಲಿ ದಲಿತರನ್ನು ಯಾಕೆ ಮುಖ್ಯಮಂತ್ರಿ ಮಾಡಬಾರದು" ಎಂಬ ಪ್ರಶ್ನೆ ಎತ್ತಿದ್ದಾರೆ. ಈ ವಿಷಯವಾಗಿ ಮಹದೇವಪ್ಪ ಅವರು ಮಾತನಾಡಿದ್ದು, ಇತರೆ ರಾಜ್ಯಗಳ ಉದಾಹರಣೆಗಳನ್ನು ನೀಡಿ ದಲಿತ ಸಿಎಂ ಸಾಧ್ಯತೆಯನ್ನು ಸಮರ್ಥಿಸಿದ್ದಾರೆ ಎಂದು ರಾಜಣ್ಣ ನೆನಪಿಸಿಕೊಂಡಿದ್ದಾರೆ. ದಲಿತರು, ಅಲ್ಪಸಂಖ್ಯಾತರು, ವಾಲ್ಮೀಕಿ ಸಮುದಾಯದವರು ಅಥವಾ ಬಲಿಜ ಸಮುದಾಯದವರು ಮುಖ್ಯಮಂತ್ರಿ ಸ್ಥಾನಕ್ಕೆ ಅರ್ಹರಲ್ಲವೇ ಎಂದು ರಾಜಣ್ಣ ಪ್ರಶ್ನಿಸಿದರು. ಕಾಂಗ್ರೆಸ್ ಪಕ್ಷದ ಇತಿಹಾಸವನ್ನು ವಿವರಿಸಿರುವ ರಾಜಣ್ಣ, ಕಾಂಗ್ರೆಸ್ ಯಾವಾಗಲೂ ಎಲ್ಲ **3ನೇ ಪುಟಕ್ಕೆ**

## ಅನಾಥ ಮಕ್ಕಳ ಅನ್ನಕ್ಕೂ ಕನ್ನ ಹಾಕಿದೆ ರಾಜ್ಯ ಸರ್ಕಾರ –ಆರ್.ಅಶೋಕ್



**ಬೆಂಗಳೂರು:** ದುರಾಡಳಿತ ಹಾಗೂ ಸಿಎಂ ಖುರ್ಚಿ ಸ್ಥಾನಕ್ಕಾಗಿ ಕಿತ್ತಾಟದಲ್ಲಿ ಮುಳುಗಿರುವ ರಾಜ್ಯ ಸರ್ಕಾರವು ಅನಾಥ ಮಕ್ಕಳ ಅನ್ನಕ್ಕೂ ಕನ್ನ ಹಾಕಿದ್ದು, ಕಳೆದ 7 ತಿಂಗಳಿನಿಂದ ಈ ಮಕ್ಕಳಿಗೆ ಕೊಡಬೇಕಾದ ಅನುದಾನ ನೀಡದೆ ವಿಳಂಬ ಧೋರಣೆ ಅನುಸರಿಸಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ವಿವಿಧ ಕಾರಣಗಳಿಗಾಗಿ ಅನಾಥರಾಗುವ ಮಕ್ಕಳ ಸಂಖ್ಯೆ ರಾಜ್ಯದಲ್ಲಿ 26,334 ರಷ್ಟಿದ್ದಾರೆ. ಇವರ ಊಟ, ವಸತಿ **3ನೇ ಪುಟಕ್ಕೆ**



## ಭಾರತ ಕೇವಲ ಎಐ ಕ್ರಾಂತಿಯ ಭಾಗವಲ್ಲ: ಪ್ರಧಾನಿ ಮೋದಿ

ಒಂದನೇ ಪುಟದಿಂದ......

ಶೃಂಗಸಭೆ ಉದ್ಘಾಟಿಸಿ ಮಾತನಾಡಿದ ಅವರು, ಭಾರತದಲ್ಲಿ ಎಕ್ಸ್‌ಪೋ ನಡೆಯುತ್ತಿದೆ. ಇದು ಆರನೇ ಒಂದು ಭಾಗದ ಮಾನವೀಯತೆಯನ್ನು ಪ್ರತಿನಿಧಿಸುತ್ತಿದೆ. ವಿಶ್ವದ ಅತಿ ಹೆಚ್ಚು ಯುವ ಜನಸಂಖ್ಯೆ ಹೊಂದಿರುವ ಮತ್ತು ಅತಿದೊಡ್ಡ ತಾಂತ್ರಿಕ ಪ್ರತಿಭಾನ್ವಿತರ ಕೇಂದ್ರವಾಗಿರುವ ದೇಶ ಭಾರತ ಎಂದರು. ಭಾರತ ಹೊಸ ತಂತ್ರಜ್ಞಾನವನ್ನು ನಿರ್ಮಿಸುವುದು ಮಾತ್ರವಲ್ಲ. ಬದಲಾಗಿ, ಹೊರಹೊಮ್ಮುತ್ತಿರುವ ಜಾಗತಿಕ ಸವಾಲುಗಳನ್ನು ನಿವಾರಿಸಲು ತ್ವರಿತವಾಗಿ ಅಳವಡಿಸಿಕೊಳ್ಳುತ್ತಿದೆ. ದೇಶದಲ್ಲಿ ಡಿಜಿಟಲ್ ಸಾಮರ್ಥ್ಯ ಬೆಳವಣಿಗೆಗಳ ಕುರಿತು ಮಾತನಾಡಿದ ಪ್ರಧಾನಿ, ಭಾರತ ಕೃತಕ ಬುದ್ಧಿಮತ್ತೆಯ ಕ್ರಾಂತಿಯಲ್ಲಿ ಮುಂಚೂಣಿಯಲ್ಲಿದೆ ಎಂದು ಹೇಳಿದರು. ಅನೇಕ ಜನರು ಹೊಸ ತಂತ್ರಜ್ಞಾನದ ಬಗ್ಗೆ ಅನುಮಾನ ಹೊಂದಿದ್ದರು. ಆದರೆ, ಯುವ ಜನತೆ ಎಐ ಅನ್ನುಅಪ್ಪಿಕೊಂಡಿದ್ದಾರೆ. ಎಐ ಶೃಂಗಸಭೆಯ ಕುರಿತು ಅಪಾರ ಉತ್ಸಾಹ ಕಂಡು ಬಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಮಾನವ ಇತಿಹಾಸದ ಹಾದಿಯಲ್ಲಿ ಇಡೀ ಶತಮಾನಗಳನ್ನು ರೂಪಿಸಿದ ಕೆಲವು ತಿರುವುಗಳಿವೆ. ಈ ತಿರುವುಗಳು ನಾಗರಿಕತೆಯ ದಿಕ್ಕನ್ನು ನಿಗದಿಪಡಿಸುತ್ತವೆ. ಬೆಂಕಿ ಮತ್ತು ಲಿಪಿಗಳು ಹೇಗೆ ನಾಗರಿಕತೆಯ ಆವಿಷ್ಕಾರವನ್ನು ಪುನರ್‌ರೂಪಿಸಿದವೋ ಅದೇ ರೀತಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ವ್ಯವಸ್ಥೆಗಳು ಮತ್ತು ಸಮಾಜದ ಅಭಿವೃದ್ಧಿಯ ವೇಗವನ್ನು ಪರಿವರ್ತಿಸುತ್ತವೆ. ಕೃತಕ ಬುದ್ಧಿಮತ್ತೆಯು ಇತಿಹಾಸದಲ್ಲಿ ಅಂತಹ ಒಂದು ರೂಪಾಂತರ ಎಂದು ಮೋದಿ ಬಣ್ಣಿಸಿದರು. ಎಐ ಭವಿಷ್ಯ ರೂಪಿಸುತ್ತದೆ ಎಂಬುದು ನಿಜವಾದ ಚರ್ಚೆಯಲ್ಲ. ಬದಲಾಗಿ, ಅದನ್ನು ಹೇಗೆ ಅರ್ಥಪೂರ್ಣವಾಗಿ ಬಳಕೆ ಮಾಡಬಹುದು ಎಂಬುದಾಗಿದೆ. ಎಐ ಅಪಾರ ಸಾಮರ್ಥ್ಯ ಹೊಂದಿರುವ ಪರಿವರ್ತಕ ಶಕ್ತಿ. ಆದರೆ, ಅದುತನ್ನ ಉದ್ದೇಶಿತ ಗುರಿಗಳಿಂದ ದೂರ ಸರಿದರೆ ವಿನಾಶಕಾರಿಯಾಗಬಹುದು. ಜವಾಬ್ದಾರಿಯುತವಾಗಿ ಮಾರ್ಗದರ್ಶನ ನೀಡಿದರೆ ಜಾಗತಿಕ ಸಮಸ್ಯೆಗಳಿಗೆ ಪ್ರಬಲ ಪರಿಹಾರಗಳನ್ನು ಒದಗಿಸುತ್ತದೆ ಎಂದು ಮೋದಿ ಎಚ್ಚರಿಸಿದರು.

## ದಲಿತರನ್ನುಯಾಕೆ ಮುಖ್ಯಮಂತ್ರಿ ಮಾಡಬಾರದು : ಕೆ.ಎನ್. ರಾಜಣ್ಣ

ಒಂದನೇ ಪುಟದಿಂದ......

ಸಮುದಾಯದವರಿಗೂ ನ್ಯಾಯ ಒದಗಿಸಲು ಪ್ರಯತ್ನಿಸಿದೆ ಎಂದು ಹೇಳಿದ್ದಾರೆ. 1972ರಲ್ಲಿ ದೇವರಾಜ ಅರಸು ಶಾಸಕರಾಗಿರದಿದ್ದರೂ, ಪಕ್ಷದ ಹೆಚ್ಚಿನ ಶಾಸಕರ ಒಲವನ್ನು ಪರಿಗಣಿಸಿ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಲಾಯಿತು. ಇದೇ ರೀತಿ ವೀರಪ್ಪ ಮೊಯ್ಲಿ ಮತ್ತು ಧರಂ ಸಿಂಗ್ ಅವರ ವಿಷಯದಲ್ಲಿಯೂ ಅವರ ಸಮುದಾಯದಿಂದ ಇನ್ನೊಬ್ಬ ಪ್ರಮುಖ ನಾಯಕರು ಇರಲಿಲ್ಲ. ಆದರೂ ಪಕ್ಷ ಅವರಿಗೆ ಅವಕಾಶ ನೀಡಿತು. ಕಾಂಗ್ರೆಸ್ ಪಕ್ಷ ಒಕ್ಕಲಿಗ ಮತ್ತು ಲಿಂಗಾಯತ ಸಮುದಾಯದವರಿಗೆ ಮುಖ್ಯಮಂತ್ರಿ ಸ್ಥಾನ ನೀಡಿದೆ. ಅಲ್ಪಸಂಖ್ಯಾತರು ಮತ್ತು ಬಣಜಿಗರಂತಹ ಸಮುದಾಯಗಳಿಗೆ ಈ ಅವಕಾಶ ಸಿಕ್ಕಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಹೆಚ್ಚು ಜನಸಂಖ್ಯೆ ಇರುವ ಸಮುದಾಯಗಳಾದ ವಾಲ್ಮೀಕಿ ಮತ್ತು ಕುರುಬರ ಜೊತೆಗೆ ವಾಲ್ಮೀಕಿ ಸಮುದಾಯದ ವರಿಗೆ ಹೆಚ್ಚಿನ ಅವಕಾಶಗಳು ದೊರೆತಿಲ್ಲ ಎಂದರು.

## ಅನಾಥ ಮಕ್ಕಳ ಅನ್ನಕ್ಕೂಕನ್ನ ಹಾಕಿದೆ ರಾಜ್ಯ ಸರ್ಕಾರ – ಅರ್.ಅಶೋಕ್

ಒಂದನೇ ಪುಟದಿಂದ......

ನಿರ್ವಹಣೆಗಾಗಿ ಪ್ರತಿ ತಿಂಗಳು ಒಬ್ಬರಿಗೆ 4 ಸಾವಿರರೂ. ನೀಡಬೇಕು. ಆದರೆ ಸರ್ಕಾರವು ಕಳೆದ ಏಳು ತಿಂಗಳಿಂದ ಸುಮಾರು 75 ಕೋಟಿರೂ. ಹಣ ನೀಡಿಲ್ಲ. ಅಂತವರ ಹಣವನ್ನು ನುಂಗಿರುವ ಸರ್ಕಾರ ಪಾಪರ್ ಆಗಿದೆ ಎಂದು ಹರಿಹಾಯ್ದರು. ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗಾಗಿ ರಾಜ್ಯ ಸಾರಿಗೆ ನೌಕರರು ನಾಳೆಯಿಂದ ಮುಷ್ಕರಕ್ಕೆ ಕರೆ ನೀಡಿದ್ದಾರೆ. ನೌಕರರ ವಿರುದ್ಧ ಎಸ್ಮಾ ಜಾರಿ ಮಾಡುವುದಾಗಿ ಸರ್ಕಾರ ಎಚ್ಚರಿಸಿದೆ. ಇದಕ್ಕೆ ನೌಕರರು ಡೋಂಟ್ ಕೇರ್ ಎಂದು ಹೋರಾಟಕ್ಕೆ ಮುಂದಾಗಿದ್ದಾರೆ. ನಾನು ಸಾರಿಗೆ ಸಚಿವನಾಗಿದ್ದಾಗ ಎಂದಿಗೂ ಸಾರಿಗೆ ನಿಗಮಗಳು ನಷ್ಟದಿಂದ ಇರಲಿಲ್ಲ. ಒಂದು ವೇಳೆ ಆಗಿದ್ದರೆ ದಾಖಲೆ ಬಿಡುಗಡೆ ಮಾಡಲಿ ಎಂದು ಸವಾಲೆಸೆದರು. ಕಳೆದ ಎರಡು ದಿನಗಳಿಂದ ಕಸ ವಿಲೇವಾರಿ ಯಾಗುತ್ತಿಲ್ಲ. ಈ ಪರಿಸ್ಥಿತಿ ಮುಂದುವರೆದರೆ ಬೆಂಗಳೂರು ಗಾರ್ಬೇಜ್ ಸಿಟಿಯಾಗಲಿದೆ. ನಗರದ ಮಿಟಗಾನಹಳ್ಳಿ, ಬೆಳ್ಳಳ್ಳಿ ಹಾಗೂ ದೊಡ್ಡ ಬಳ್ಳಾಪುರದ ಬೆಲ್ಲಹಳ್ಳಿಯ ಡಪಿಂಗ್ ಯಾರ್ಡ್‌ಗಳಲ್ಲಿ ಕಸ ವಿಲೇವಾರಿಯಾಗುತ್ತಿಲ್ಲ. ಕಸ ಟೆಂಡರ್ ಮಾಡಲು ಸರ್ಕಾರಕ್ಕೆ ಕಮಿಷನ್ ನೀಡಬೇಕಿದೆ. ಈ ಬಗ್ಗೆ ಗುತ್ತಿಗೆದಾರರು ಸಹ ಕಮಿಷನ್ ಸರ್ಕಾರದ ನಡೆಗೆ ಬೇಸತ್ತಿದ್ದಾರೆ. ಸುಮಾರು 37 ಸಾವಿರಕೋಟಿ ಬರಬೇಕಿದೆ ಎಂದು ಗುತ್ತಿಗೆದಾರರ ಸಂಘ ಆರೋಪಿಸಿದೆ. ಈ ಬಗ್ಗೆ ಸಿದ್ದರಾಮಯ್ಯ ಅವರು ಜಾರಿಕೆ ಉತ್ತರ ಕೊಡುತ್ತಾರೆ. ಈ ಸರ್ಕಾರ ದುರಾಡಳಿತ ಹಾಗೂ ಆಂತರಿಕ ಕಚ್ಚಾಟದಲ್ಲಿ ಅಭಿವೃದ್ಧಿಕಾರ್ಯವನ್ನು ಮರೆತಿದೆ ಎಂದು ಆರೋಪಿಸಿದರು.

## ಅಲ್ಪಸಂಖ್ಯಾತರ ವಸತಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು – ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಮತ್ತು ಪಾರ್ಸಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ದ.ಕ ಜಿಲ್ಲೆಯಲ್ಲಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳಿಗೆ ಶೈಕ್ಷಣಿಕ ವರ್ಷ 2026–27ನೇ ಸಾಲಿನಲ್ಲಿ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ 08242433078, 08255232470, 0826295335, 08251237078, 08257230666 ಹಾಗೂ ಇಲಾಖೆಯ ವೆಬ್‌ಸೈಟ್ https://dom.karnataka.gov.in ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಉದ್ಯೋಗ ಮೇಳ

ಶಿವಮೊಗ್ಗ : ಶಿವಮೊಗ್ಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಫೆ.21 ರ ಬೆಳಗ್ಗೆ 11 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗುತ್ಯಪ್ಪ ಕಾಲೋನಿ, 2ನೇ ಕ್ರಾಸ್, ಪಂಪನಗರ, ಸಾಗರ ರಸ್ತೆ, ಶಿವಮೊಗ್ಗ ಇವರನ್ನು ಅಥವಾ ಮೊ.ಸಂ. 9901914601ಗಳನ್ನು ಸಂಪರ್ಕಿಸುವಂತೆ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ತರಕಾರಿ ಬೀಜಗಳ ಕಿಟ್ ವಿತರಣೆಗೆ ರೈತರಿಂದ ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ತಾಲ್ಲೂಕು ತೋಟಗಾರಿಕೆ ಇಲಾಖೆಯ ವತಿಯಿಂದ 2025–26 ನೇ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ 'ತರಕಾರಿ ಬೀಜಗಳ ಕಿಟ್'ಗಳನ್ನು ರೈತರಿಗೆ ವಿತರಿಸಲು ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ರೈತರು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ಗಾಂಧಿಪಾರ್ಕ್, ಶಿವಮೊಗ್ಗ ಇವರನ್ನು ಅಥವಾ ಹೋಬಳಿ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಿ ಅರ್ಜಿಯನ್ನು ಪಡೆದು ಸಲ್ಲಿಸಬಹುದು ಎಂದು ಶಿವಮೊಗ್ಗ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯದನ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ಉಪ್ಪಾರ ಸಮುದಾಯದ ಅಭಿವೃದ್ಧಿ ನಿಗಮದ ವತಿಯಿಂದ 2025–26ನೇ ಸಾಲಿಗೆ ಆಹಾರ ವಾಹಿನಿ ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಗೆಗಳನ್ನು ನಾಲ್ಕು ಚಕ್ರಗಳ ಇವಿ–ಗೂಡ್ಸ್ ವಾಹನಗಳನ್ನು ಅಗತ್ಯಕ್ಕೆ ತಕ್ಕಂತೆ ನವೀಕರಿಸಿ ಫಲಾನುಭವಿಗಳಿಗೆ ವಿತರಿಸುವ ಯೋಜನೆಯಲ್ಲಿ ನಿಗಮದಿಂದ ವಾಹನ ಖರೀದಿಗೆ ರೂ.3.00 ಲಕ್ಷಗಳ ಸಹಾಯಧನವನ್ನು ಪಡೆಯಲು ಸೇವಾಸಿಂದು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಿಗಮದ ಜಾಲತಾಣ www. uppardevelopment.karnataka.gov.in ಹಾಗೂ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಟ್ಟಡ, ಬಾಲರಾಜ್ ಅರಸ್ ರಸ್ತೆ, ಕೆ.ಇ.ಬಿ. ಸರ್ಕಲ್ ಹತ್ತಿರ, ಶಿವಮೊಗ್ಗ,ದೂ. ಸಂ:08182–229634ನ್ನು ಸಂಪರ್ಕಿಸುವುದು.

## ಕಾನೂನು ಪದವೀಧರರಿಂದ ಅರ್ಜಿ ಆಹ್ವಾನ

ಮಡಿಕೇರಿ – ಕಾನೂನು ಪದವೀಧರರಿಗೆ ಪ್ರೋತ್ಸಾಹ ನೀಡುವ ಯೋಜನೆಗೆ 2025–26ನೇ ಸಾಲಿನಲ್ಲಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತ್ವರಿತವಾಗಿ ತಲುಪಿಸುವ ಉದ್ದೇಶದಿಂದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದ್ದು, ಅರ್ಹವಿರುವ ನವ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ.

## ವೇದವ್ಯಾಸ ಕಾಮತ್ ನೇತೃತ್ವದಲ್ಲಿ ಆಟೋ ಪಾರ್ಕ್ ಶಿಲನ್ಯಾಸ



ಮಂಗಳೂರು: ಮಹಾನಗರ ಪಾಲಿಕೆ ವ್ಯಾಪ್ತಿಯ 40ನೇ ಕೋರ್ಟ್ ವಾರ್ಡಿನ ಸೆಂಟ್ರಲ್ ರೈಲ್ವೆ ನಿಲ್ದಾಣದ ಎದುರು ರಿಕ್ಷಾ ಮಾಲಕ–ಚಾಲಕರ ಹಾಗೂ ಸಾರ್ವಜನಿಕರ ಬೇಡಿಕೆಯ ಮೇರೆಗೆ ರೂ.18 ಲಕ್ಷ ವಿಶೇಷ ಅನುದಾನದಲ್ಲಿ ಆಟೋ ಪಾರ್ಕ್ ಅಭಿವೃದ್ಧಿಗೊಳ್ಳಲಿದ್ದು ಶಾಸಕ ವೇದವ್ಯಾಸ ಕಾಮತ್‌ರವರ ನೇತೃತ್ವದಲ್ಲಿ ಶಿಲಾನ್ಯಾಸ ನಡೆಯಿತು. ನಂತರ ಮಾತನಾಡಿದ ಶಾಸಕರು, ಇಲ್ಲಿ ನಿರ್ಮಾಣಗೊಳ್ಳಲಿರುವ ಸುಸಜ್ಜಿತ ಮೇಲ್ಛಾವಣಿಯಿಂದಾಗಿ ರಿಕ್ಷಾ ಚಾಲಕರು ಉರಿ ಬಿಸಿಲು ಹಾಗೂ ಮಳೆಗಾಲದಲ್ಲಿ ಆಶ್ರಯ ಪಡೆಯಲು ಅನುಕೂಲವಾಗಲಿದೆ. ಇಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ರೈಲ್ವೆ ಇಲಾಖೆಯ ಅನುಮತಿ ಕಡ್ಡಾಯವಾಗಿದ್ದು, ಆ ನಿಟ್ಟಿನಲ್ಲಿ ನಮ್ಮ ಮನವಿಗೆ ಸಂಪೂರ್ಣ ರೀತಿಯಲ್ಲಿ ಸಹಕಾರದ ನೀಡಿದ ರೈಲ್ವೆ ಅಧಿಕಾರಿ ಯಾಧವ್ ರಿಗೆ ವಿಶೇಷ ಧನ್ಯವಾದಗಳು. ಮುಂದಿನ ದಿನಗಳಲ್ಲಿ ಇಲ್ಲಿಗೊಂದು ಕುಡಿಯುವ ಶುದ್ಧ ನೀರಿನ ಘಟಕವನ್ನೂ ಸಹ ನಿರ್ಮಿಸಲಾಗುವುದು ಎಂದರು.

## ಶ್ರೀ ಕ್ಷೇತ್ರ ಅರ್ಕುಳದಲ್ಲಿ ನೂತನ ಅಶ್ವ ರಥದ ಸಮರ್ಪಣೆ



ಮಂಗಳೂರು : ಶ್ರೀ ಕ್ಷೇತ್ರ ಅರ್ಕುಳದಲ್ಲಿ ನೂತನ ಅಶ್ವರಥದ ಸಮರ್ಪಣೆಯ ಅಂಗವಾಗಿ ಭಾನುವಾರ ಸಂಜೆ ಭವ್ಯ ಮೆರವಣಿಗೆ ಭಕ್ತಿಭಾವಪೂರ್ಣ ವಾತಾವರಣದಲ್ಲಿ ನಡೆಯಿತು. ಮಂಗಳೂರು ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಭರತ್ ಶೆಟ್ಟಿ ಹಾಗೂ ಅರ್ಕುಳ ಬೀಡು ಧರ್ಮದರ್ಶಿ ವಜ್ರನಾಭ ಶೆಟ್ಟಿ ಮೆರವಣಿಗೆಗೆ ಚಾಲನೆ ನೀಡಿ ಕಾರ್ಯಕ್ರಮಕ್ಕೆ ಶುಭಕೋರಿದರು. ಫರಂಗಿಪೇಟೆಯ ಸೇವಾಂಜಲಿ ಸಭಾಭವನದಿಂದ ಪ್ರಾರಂಭವಾದ ಮೆರವಣಿಗೆ ಅರ್ಕುಳ ಕ್ಷೇತ್ರದವರೆಗೆ ಸಾಗಿದ್ದು, ಮಾರ್ಗಮಧ್ಯೆ ಭಕ್ತರು ಹೂಮಾಲೆ, ಆರತಿ ಹಾಗೂ ಘೋಷಣೆಗಳ ಮೂಲಕ ಭಕ್ತಿಪೂರ್ಣ ಸ್ವಾಗತ ಕೋರಿದರು. ಗ್ರಾಮಸ್ಥರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಭಕ್ತರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಭವ್ಯತೆಯನ್ನು ನೀಡಿದರು.

## ಕಾಲು ಸಂಕಕ್ಕೆ ಐವನ್ ಡಿ' ಸೋಜಾರಿಂದ ಸ್ಥಳ ವಿಕ್ಷಣೆ



ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಜೆಪ್ಪಿನಮೊಗರು ವಾರ್ಡಿನ ಆಡಂಕುದ್ರು ಎಂಬಲ್ಲಿ ಮಳೆಹಾನಿ ಯೋಜನೆಯಿಂದ 30.00 ಲಕ್ಷ ವೆಚ್ಚದಲ್ಲಿ ಕಾಲುಸಂಕ ರಚನೆ ಮಾಡಲು ಈ ಬಗ್ಗೆ ಅಂದಾಜುಪಟ್ಟಿ ರಚನೆಯಾಗಿದ್ದು ಈ ಬಗ್ಗೆ ಅದನ್ನು ಯಾವ ರೀತಿ ರಚನೆ ಮಾಡಬೇಕೆಂಬುದನ್ನು ಸ್ಥಳೀಯ ನಾಗರೀಕರೊಂದಿಗೆ ವಿಧಾನ ಪರಿಷತ್ ಶಾಸಕರಾದ ಐವನ್ ಡಿ'ಸೋಜಾರವರು ಸ್ಥಳಕ್ಕೆ ಭೇಟಿ ನೀಡಿ ಚರ್ಚೆ ನಡೆಸಿದರು ಈ ಸಂದರ್ಭದಲ್ಲಿ ಅನೇಕ ಗ್ರಾಮಸ್ಥರು ಮತ್ತು ಪ್ರಮುಖರಿದ್ದು, ಈ ಕಾಮಗಾರಿಯನ್ನು ಕೂಡಲೇ ನಡೆಸುವಂತೆ ಕೋರಿದರು. ಈ ಕಾಲುಸಂಕ ಅನೇಕ ಮನೆಗಳಿಗೆ ಹೋಗುವ ದಾರಿಯಾಗಿದ್ದು, ಈ ಕಾಮಗಾರಿ ನಡೆದರೆ ಸುಮಾರು 35ಕುಟುಂಬಗಳಿಗೆ ಮಳೆಗಾಲದಲ್ಲಿ ಹಾದು ಹೋಗಲು ಸಾಧ್ಯವಾಗುತ್ತದೆ ಎಂದರು.

## ಮಂಜುನಾಥ ಭಂಡಾರಿ ಅರೋಗ್ಯ ವಿಚಾರಿಸಿದ ಮಲ್ಲಿಕಾರ್ಜುನ ಖರ್ಗೆ



ಮಂಗಳೂರು : ಅನಾರೋಗ್ಯ ಹಿನ್ನೆಲೆಯಲ್ಲಿ ಬೆಂಗಳೂರಿನ ನಾರಾಯಣ ಹೃದಯಾಲಯದಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ವಿಧಾನ ಪರಿಷತ್ ಶಾಸಕರು ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರು ಆಗಿರುವ ಮಂಜುನಾಥ ಭಂಡಾರಿ ಅವರನ್ನು ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪತ್ನಿ ಸಮೇತ ಭೇಟಿಯಾಗಿ ಅರೋಗ್ಯ ವಿಚಾರಿಸಿದರು. ಮಂಜುನಾಥ ಭಂಡಾರಿ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ನಾರಾಯಣ ಹೃದಯಾಲಯದಲ್ಲಿ ದಾಖಲಾಗಿರುವ ಮಂಜುನಾಥ ಭಂಡಾರಿ ಅವರ ಅರೋಗ್ಯ ಸುಧಾರಿಸುತ್ತಿದ್ದು ಶೀಘ್ರ ಗುಣಮುಖರಾಗಿ ಬರಲಿ ಎಂದು ಖರ್ಗೆ ಶುಭ ಹಾರೈಸಿ ತೆರಳಿದರು. ಈ ಸಂದರ್ಭದಲ್ಲಿ ಮಂಜುನಾಥ ಭಂಡಾರಿ ಅವರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

## ಶಿವರಾತ್ರಿಗೆ ಧರ್ಮಸ್ಥಳದಲ್ಲಿ ಶಿವಪಂಚಾಕ್ಷರಿ ಪಠಣ





ಉಜಿರೆ: "ಸರ್ವೇಜನಾಃ ಸುಖಿನೋ ಭವಂತು". ಎಲ್ಲರಿಗೂ ಸುಖ–ಶಾಂತಿ, ನೆಮ್ಮದಿಯೊಂದಿಗೆ ಸನ್ಮಂಗಳವಾಗಲಿ ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಸರ್ವರಿಗೂ ಕಲ್ಯಾಣವಾಗಲಿ ಎಂದು ಹಾರೈಸಿದರು. ಅವರು ಭಾನುವಾರ ಧರ್ಮಸ್ಥಳದಲ್ಲಿ ಪ್ರವಚನ ಮಂಟಪದಲ್ಲಿ ಅಹೋರಾತ್ರಿ ಶಿವಪಂಚಾಕ್ಷರಿ ಪಠಣಕ್ಕೆ ದೀಪಬೆಳಗಿಸಿ ಚಾಲನೆ ನೀಡಿ ಶುಭ ಹಾರೈಸಿದರು. ಬಳಿಕ ಎಲ್ಲರೂ ಸಾಮೂಹಿಕವಾಗಿ "ಓಂ ನಮಃ ಶಿವಾಯ" ಪಠಣ ಮಾಡಿದರು. ನಿಮ್ಮ ಎಲ್ಲಾ ಕಷ್ಟಗಳನ್ನು ಶಿವನಿಗೆ ಅರ್ಪಿಸಿ, ಸುವಿಚಾರ ಗಳನ್ನು ಮಾತ್ರ ಕೊಂಡು ಹೋಗಿ. ವಿಷಕಂಠನಾದ ಶಿವನಿಗೆ ಮಾತ್ರ ಹಾಲಾಹಲ ಸ್ವೀಕರಿಸುವ ಸಾಮರ್ಥ್ಯವಿದೆ. ನನಗೆ ಎಂದು ವೈಯಕ್ತಿಕವಾಗಿ ಸುಖಕ್ಕಾಗಿ ಪ್ರಾರ್ಥಿಸುವ ಬದಲು ನಮಗೆ, ಇಡಿ ಸಮಾಜಕ್ಕೆ ಕಲ್ಯಾಣವಾಗಲಿ ಎಂಬ ಪ್ರಾರ್ಥನೆ ನಿಮ್ಮದಾಗಲಿ ಎಂದು ಹೇಳಿ ಅವರು ಶುಭ ಹಾರೈಸಿದರು.

## ಆರ್ಥಿಕ ವಿಸ್ತರಣೆಗೆ ಬ್ಯಾಂಕಿಂಗ್ ಕ್ಷೇತ್ರವೇ ಭದ್ರ ಬುನಾದಿ – ದೆಬಾಶೀಶ್ ಪಾಂಡಾ




ಮಂಗಳೂರು: "ಭಾರತವು ಇಂದು ಕೇವಲ ಅಲ್ಪಾವಧಿಯ ಅನುಭೋಗದ ಆಧಾರದ ಮೇಲೆ ಬೆಳೆಯುತ್ತಿಲ್ಲ, ಬದಲಾಗಿ ಉತ್ಪಾದಕತೆಯನ್ನು ಹೆಚ್ಚಿಸುವ ಮೂಲಸೌಕರ್ಯಗಳ ಮೇಲೆ ಹೂಡಿಕೆ ಮಾಡುವ ಮೂಲಕ ದೀರ್ಘಾವಧಿ ಯ ಸುಸ್ಥಿರ ಆರ್ಥಿಕ ವಿಸ್ತರಣೆಗೆ ಭದ್ರ ಬುನಾದಿ ಹಾಕುತ್ತಿದೆ. ಈ ಮಹತ್ವಾಕಾಂಕ್ಷಿ ಪಯಣದಲ್ಲಿ ಬ್ಯಾಂಕಿಂಗ್ ಕ್ಷೇತ್ರವು ಕೇವಲ ಪೂರಕವಾಗಿರದೆ, ದೇಶದ ಆರ್ಥಿಕತೆಯ ಕೇಂದ್ರ ಬಿಂದುವಾಗಿ ಕಾರ್ಯನಿರ್ವಹಿಸಬೇಕಿದೆ," ಎಂದು ವಿಶ್ರಾಂತ ಐಎಎಸ್ ಅಧಿಕಾರಿ, ಹಣಕಾಸು ತಜ್ಞ ದೆಬಾಶೀಶ್ ಪಾಂಡಾ ಅವರು ಹೇಳಿದರು. ನಗರದ ಕರ್ನಾಟಕ ಬ್ಯಾಂಕ್ ಪ್ರಧಾನ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬ್ಯಾಂಕಿನ 102ನೇ ಸಂಸ್ಥಾಪಕರ ದಿನಾಚರಣೆ ಯಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

## ಆಳ್ವಾಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ



ಮೂಡುಬಿದಿರೆ:ಜೆಇಇ ಮೈನ್ಸ್ ಪರೀಕ್ಷೆಯ ಪ್ರಥಮ ಹಂತದ ಫಲಿತಾಂಶ ಪ್ರಕಟಗೊಂಡಿದ್ದು ಆಳ್ವಾಸ್ ಪದವಿಪೂರ್ವ ಕಾಲೇಜಿನ ಪಿಯುಷ್ ಎಚ್. 994585176 ಪರ್ಸೆಂಟೈಲ್ ಗಳಿಸಿ ಸಾಧನೆ ಮೆರೆದಿದ್ದಾರೆ. 97 ಪರ್ಸೆಂಟೈಲ್‌ಗಿಂತ ಅಧಿಕ 22 ವಿದ್ಯಾರ್ಥಿಗಳು, 96 ಪರ್ಸೆಂಟೈಲ್‌ಗಿಂತ ಅಧಿಕ 38 ವಿದ್ಯಾರ್ಥಿಗಳು ಮತ್ತು 95 ಪರ್ಸೆಂಟೈಲ್‌ಗಿಂತ ಅಧಿಕ 58 ವಿದ್ಯಾರ್ಥಿಗಳು ಅಂಕ ಪಡೆದಿದ್ದಾರೆ. ಭೌತಶಾಸ್ತ್ರ ವಿಷಯದಲ್ಲಿ 5 ವಿದ್ಯಾರ್ಥಿಗಳು, ರಸಾಯನಶಾಸ್ತ್ರ ವಿಷಯದಲ್ಲಿ 11 ವಿದ್ಯಾರ್ಥಿಗಳು ಮತ್ತು ಗಣಿತದಲ್ಲಿ 3 ವಿದ್ಯಾರ್ಥಿಗಳು 99 ಪರ್ಸೆಂಟೈಲ್‌ಗಳಿಗಿಂತ ಅಧಿಕ ಅಂಕ ಪಡೆದಿದ್ದಾರೆ. ಸಾಧನೆ ಮೆರೆದ ಈ ಎಲ್ಲಾ ವಿದ್ಯಾರ್ಥಿಗಳು ಒಂದೇ ಕ್ಯಾಂಪಸ್ಸಿನ 2 ವರ್ಷದ ಕ್ಲಾಸ್ರೂಮ್ ವ್ಯವಸ್ಥೆಯಲ್ಲಿ ಪಿಯುಸಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಾಗಿರುತ್ತಾರೆ. ಈ ವಿದ್ಯಾರ್ಥಿಗಳನ್ನು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ ಎಂ. ಮೋಹನ್ ಆಳ್ವ ಅಭಿನಂದಿಸಿದ್ದಾರೆ.

## ಶ್ರೀ ಜ್ವಾಲಾ ಮಹಮ್ಮಾಯಿ – ಕಾಲಭೈರವ ದೇವರ ಪ್ರತಿಷ್ಠಾ ಮಹೋತ್ಸವ



ಮಂಗಳೂರು: ನಗರದ ಹೊರವಲಯದ ಇತಿಹಾಸ ಪ್ರಸಿದ್ಧ ಮರೋಳಿ ಗ್ರಾಮದ ಅಲಂಗಾರು ಎಂಬಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ಜ್ವಾಲಾ ಮಹಮ್ಮಾಯಿ – ಕಾಲಭೈರವ ದೇವರ ಹಾಗೂ ಪರಿವಾರ ದೈವಗಳ ಪ್ರತಿಷ್ಠಾ ಮಹೋತ್ಸ ವವು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಜರುಗಲಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಶರತ್ ಕುಮಾರ್ ಅಲಂಗಾರ್ ಅವರು ತಿಳಿಸಿದ್ದಾರೆ. ಅಷ್ಟಮಂಗಲ ಪ್ರಶ್ನೆಯಲ್ಲಿ ಕಂಡುಬಂದ ದೋಷಗಳ ಪರಿಹಾರಾರ್ಥವಾಗಿ ಕಳೆದ ಡಿಸೆಂಬರ್ 14 ರಂದು ಅವಧೂತ್ ಪೀರ್ ರಾಜೇಶ್‌ನಾಥ್ ಗುರೂಜಿ ಹಾಗೂ ಅಘೋರಿ ಬಾಬಾ ಅವರ ಮಾರ್ಗದರ್ಶನದಲ್ಲಿ ಶಿಲಾನ್ಯಾಸ ನೆರವೇರಿಸಲಾಗಿತ್ತು. ಕೇವಲ ಎರಡು ತಿಂಗಳ ಅವಧಿಯಲ್ಲಿ ಭಕ್ತಾದಿಗಳ ಸಹಕಾರದೊಂದಿಗೆ ಸುಮಾರು 75 ಲಕ್ಷ ರೂ. ವೆಚ್ಚದಲ್ಲಿ ಈ ಸುಂದರ ಭವ್ಯ ದೇಗುಲವನ್ನು ಪೂರ್ಣಗೊಳಿಸಲಾಗಿದೆ.

## ರಹಸ್ಯ ಮಾಹಿತಿ ಪಾಕಿಸ್ತಾನಕ್ಕೆ ರವಾನೆ : ಆರೋಪಿ ಬಂಧನ




ಉಡುಪಿ : ಭಾರತೀಯ ನೌಕಾ ಪಡೆಗೆ ಸಂಬಂಧಿಸಿದ ರಹಸ್ಯ ಮಾಹಿತಿಯನ್ನು ಪಾಕಿಸ್ತಾನಕ್ಕೆ ರವಾನಿಸಿದ ಪ್ರಕರಣದಲ್ಲಿ ಉಡುಪಿ ಪೊಲೀಸರು ಮತ್ತೊಬ್ಬ ಆರೋಪಿಯನ್ನು ಬಂಧಿಸಿದ್ದಾರೆ. ಈ ಮೂಲಕ ಪ್ರಕರಣದಲ್ಲಿ ಬಂಧಿತರ ಸಂಖ್ಯೆ ನಾಲ್ಕಕ್ಕೆ ಏರಿಕೆಯಾಗಿದೆ. ಮಲ್ಪೆ ಬಂದರಿನ ಕೊಚ್ಚಿನ್ ಶಿಪ್ ಯಾರ್ಡ್‌ಗೆ ಸಂಬಂಧಿಸಿದ ನೌಕರರು ನೌಕಾಪಡೆಯ ಹಡಗುಗಳ ಸಂಖ್ಯೆಗಳ ಗೋಪ್ಯ ಮಾಹಿತಿಯನ್ನು ವಾಟ್ಸ್ ಆಪ್ ಮತ್ತು ಫೇಸ್‌ಬುಕ್ ಮೂಲಕ ಪಾಕಿಸ್ತಾನದ ಜತೆ ಹಂಚಿಕೊಂಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ಕುರಿತು ಮಲ್ಪೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ. ಬಂಧಿತನನ್ನು ಪಶ್ಚಿಮ ಬಂಗಾಳ ಮೂಲದ 21 ವರ್ಷದ ಆಲಿಫ್ ಇಸ್ಲಾಂ ಎಂದು ಗುರುತಿಸಲಾಗಿದೆ.

## ಅಂತಾರಾಷ್ಟ್ರೀಯ ಮಕ್ಕಳ ಕ್ಯಾನ್ಸರ್ ದಿನಾಚರಣೆ



ಮಂಗಳೂರು : ಲ್ಯಾಂಡ್ ಟ್ರೇಡ್ಸ್ ಬಿಲ್ಡರ್ಸ್ ಮತ್ತು ಡೆವಲಪರ್ಸ್ ಹಾಗೂ ಅತ್ತಾವರದ ಕೆಎಂಸಿ ಆಸ್ಪತ್ರೆಯ ಮಕ್ಕಳ ವಿಭಾಗದ ಸಹಯೋಗದಲ್ಲಿ "ಪರಿಣಾಮದ ಪ್ರದರ್ಶನ: ಸವಾಲಿನಿಂದ ಬದಲಾವಣೆ ಯತ್ತ" ಧ್ಯೇಯದೊಂದಿಗೆ ಅಂತಾರಾಷ್ಟ್ರೀಯ ಮಕ್ಕಳ ಕ್ಯಾನ್ಸರ್ ದಿನಾಚರಣೆಯನ್ನು ಅತ್ತಾವರ ಕೆಎಂಸಿ ಆಸ್ಪತ್ರೆಯಲ್ಲಿ ಆಚರಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕೆಎಂಸಿ ಮಂಗಳೂರಿನ ಡೀನ್ ಡಾ। ಬಿ. ಉಣ್ಣಿಕೃಷ್ಣನ್ ಅವರು ಮಕ್ಕಳ ಕ್ಯಾನ್ಸರ್‌ನ ಲಕ್ಷಣಗಳ ಬಗ್ಗೆ ಪೋಷಕರು ಎಚ್ಚರವಹಿಸಬೇಕು. ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿ ಚಿಕಿತ್ಸೆ ನೀಡಿದಲ್ಲಿ ಮಕ್ಕಳ ಕ್ಯಾನ್ಸರ್ ತ್ವರಿತವಾಗಿ ಸಂಪೂರ್ಣ ಗುಣಪಡಿಸಲು ಸಾಧ್ಯವಿದೆ ಎಂದರು.

## ಅಂತರರಾಷ್ಟ್ರೀಯ ಕ್ರೀಡಾಕೂಟದಲಿ ಶ್ರೀಲಕ್ಷ್ಮಿಗೆ 4ಪದಕ



ಮಂಗಳೂರು : ಅಬುಧಾಬಿಯಲ್ಲಿ ನಡೆದ ಅಂತರರಾಷ್ಟ್ರೀಯ ಮಾಸ್ಟರ್ಸ್ ಕ್ರೀಡಾಕೂಟ ದಲ್ಲಿ ವಿಟ್ಲದ ಶ್ರೀಲಕ್ಷ್ಮಿ ಅವರು ಮಾಡಿರುವ ಅದ್ಭುತ ಸಾಧನೆ. ಇಂಟರ್ನ್ಯಾಷನಲ್ ಮಾಸ್ಟರ್ಸ್ ಗೇಮ್ಸ್ ಅಸೋಸಿಯೇಷನ್ ವತಿಯಿಂದ ಆಯೋಜಿಸಲಾದ ಅಂತರರಾಷ್ಟ್ರೀಯ ಮಾಸ್ಟ ರ್ಸ್ ಕ್ರೀಡಾಕೂಟದಲ್ಲಿ ಶ್ರೀಲಕ್ಷ್ಮಿ ಒಟ್ಟು ನಾಲ್ಕು ಪದಕಗಳನ್ನು ಗೆದ್ದಿದ್ದಾರೆ. 200 ಮೀ.ಬಟರ್‌ಫ್ಲೈ ಈಜು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿ ಚಿನ್ನದ ಪದಕ, 200 ಮೀ. ಬ್ರೆಸ್ಟ್‌ಸ್ಟ್ರೋಕ್ ಮತ್ತು 100ಮೀ. ಬಟರ್‌ಫ್ಲೈ ವಿಭಾಗಗಳಲ್ಲಿ 2 ಬೆಳ್ಳಿಪದಕ ಹಾಗೂ 100ಮೀ. ಬ್ರೆಸ್ಟ್‌ಸ್ಟ್ರೋಕ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗಳಿಸಿದ್ದಾರೆ.

# ಸುದ್ದಿ ತುಣುಕು

KSRTC ನೌಕರರ ಬೇಡಿಕೆಗಳು ನಿಜವಾಗಿದ್ದು, ಅವರ ಹೋರಾಟಕ್ಕೆ ನನ್ನ ಸಹಮತವಿದೆ ಎಂದು ಸಚಿವ ಸಂತೋಷ ಲಾಡ್ ಹೇಳಿದ್ದಾರೆ.

ಕಮಿಷನ್ ಹಿಂದೆಯೂ ಇತ್ತು, ಈಗಲೂ ಇದೆ, ಮುಂದೆಯೂ ಇರುತ್ತೆ. ಅದನ್ನು ಕಂಡು ಹಿಡಿಯುವುದಕ್ಕೆ ಆಗಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ನಾವು ಮೊದಲಿನಿಂದಲೂ ನಡೆದುಕೊಂಡು ಬಂದ ರೀತಿಯಲ್ಲೇ ಕಸ ವಿಲೇವಾರಿ ಮಾಡಿಕೊಂಡು ಬರುತ್ತಿದ್ದೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ದಾವಣಗೆರೆಯ ಪ್ರಮುಖ ರೌಡಿಶೀಟರ್‌ಗಳ ಮನೆಗಳ ಮೇಲೆ ಪೊಲೀಸರು ಸ್ಪೆಷಲ್ ಡ್ರೈವ್ ನಡೆಸಿ, ತಪಾಸಣೆ ನಡೆಸಿದರು.

ಶ್ರೀ ರೇಣುಕಮ್ಮ ದೇವಿ ಜಾತ್ರಾ ಮಹೋತ್ಸವದ ವೇಳೆ ವರದಾ ನದಿಯಲ್ಲಿ ಧಾರ್ಮಿಕ ಸ್ನಾನ ಮಾಡುವುದು, ದೇವರಿಗೆ ಮುಡಿ ಕೊಡುವುದು, ಪಡ್ಲಿಗಿ ತುಂಬಿಸುವುದು ಮತ್ತು ಬೆತ್ತಲೆ ಸೇವೆಯನ್ನು ನಿಷೇಧಿಸಲಾಗಿದೆ.

ಹುಬ್ಬಳ್ಳಿಯ ಚೆನ್ನಮ್ಮ ವೃತ್ತ ಹಾಗೂ ಹೊಸೂರು ವೃತ್ತದ ಕಾಮಗಾರಿ ಸ್ಥಳಕ್ಕೆ ಶಾಸಕ ಮಹೇಶ್ ಟೆಂಗಿನಕಾಯಿ ಅವರೊಂದಿಗೆ ಡಿಸಿ ಸ್ನೇಹಲ್ ಆರ್. ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕನ ಬ್ಯಾಗ್‌ಗಳಲ್ಲಿ 23.88 ಕೋಟಿ ರೂ. ಮೌಲ್ಯದ 4.776 ಕೆ.ಜಿ ಕೊಕೇನ್ ಪತ್ತೆಯಾಗಿದೆ. ರಾಷ್ಟ್ರೀಯ ಮಾದಕ ವಸ್ತು ನಿಗ್ರಹ ವಿಭಾಗದ (ಎನ್‌ಸಿಬಿ) ಅಧಿಕಾರಿಗಳು ಈ ಕಾರ್ಯಾಚರಣೆ ನಡೆಸಿದ್ದು, ಆರೋಪಿಯನ್ನು ಬಂಧಿಸಿದ್ದಾರೆ.

ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಜಗದ್ಗುರು ಡಾ.ವಾಲ್ಮೀಕಿ ಪ್ರಸನ್ನಾನಂದ ಪುರಿ ಸ್ವಾಮೀಜಿ ಅವರಿಗೆ ಲಘು ಹೃದಯಾಘಾತವಾಗಿದ್ದು, ಚಿಕಿತ್ಸೆ ಬಳಿಕ ಚೇತರಿಸಿಕೊಂಡಿದ್ದಾರೆ.

ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಆರ್. ಮಂಜುನಾಥ್ ಅವರು ಮಾರ್ಚ್ 05 ರಂದು ಒಂದು ದಿನ ಸಾಂಕೇತಿಕವಾಗಿ ಮುಷ್ಕರ ನಡೆಸುವುದಾಗಿ ಹೇಳಿದರು.

ಜನರೊಂದಿಗೆ ಜನತಾದಳ ಎರಡನೇ ಹಂತದ ಜೆಡಿಎಸ್ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ನಡೆಸುತ್ತಿರುವ ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಬೆಂಗಳೂರು ನಗರದ ಟ್ರಾಫಿಕ್ ದಟ್ಟಣೆಗೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ಇತ್ಯರ್ಥಪಡಿಸಿದೆ.


ಭಾರತ ಹೊಸ ತಂತ್ರಜ್ಞಾನವನ್ನು ನಿರ್ಮಿಸುವುದು ಮಾತ್ರವಲ್ಲ, ಅದನ್ನು ಜಾಗತಿಕ ಸವಾಲುಗಳನ್ನು ನಿವಾರಿಸಲು ತ್ವರಿತವಾಗಿ ಅಳವಡಿಸಿಕೊಳ್ಳುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಕೈಗಾರಿಕಾ ಆಟೋಮೇಷನ್ ಮತ್ತು ತಾಂತ್ರಿಕ ಶಿಕ್ಷಣ ಕ್ಷೇತ್ರದ ಫೆಸ್ಟೋ ಸಂಸ್ಥೆಯು ಬೆಂಗಳೂರಲ್ಲಿ ಹೊಸ ಗ್ಲೋಬಲ್ ಕ್ಯಾಪಬಿಲಿಟಿ ಸೆಂಟರ್ ಅನ್ನು ಉದ್ಘಾಟಿಸಿದೆ.

ಕೊಡಾ ಶರಣಾಗತಿಯೊಂದಿಗೆ ಬಿಹಾರದಲ್ಲಿನ ನಕ್ಸಲ್ ತಾಣಗಳು ಸಂಪೂರ್ಣವಾಗಿ ನಾಶವಾಗಿವೆ. ರಾಜ್ಯ ಇದೀಗ ನಕ್ಸಲ್ ಮುಕ್ತವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸುಂದರ್ ಪಿಚೈ ಭಾರತ – ಅಮೆರಿಕ ಕನೆಕ್ಟ್ ಇನಿಶಿಯೇಟಿವ್ ಘೋಷಿಸಿದ್ದಾರೆ – ಅಮೆರಿಕ ಮತ್ತು ಭಾರತದ ನಡುವಿನ AI ಸಂಪರ್ಕ ಹೆಚ್ಚಿಸಲು ಸಬ್‌ಸೀ ಕೇಬಲ್ ಮಾರ್ಗಗಳನ್ನು ಹಾಕಲಾಗುತ್ತದೆ ಎಂದು ಹೇಳಿದ್ದಾರೆ.

# ಒಣಮೀನಿನ ಸಾರು



**ಬೇಕಾಗುವ ಸಾಮಗ್ರಿ :**

ಒಣಮೀನು – 10 ರಿಂದ 12
ಬ್ಯಾಡಗಿಮೆಣಸು – 8–10
ತೆಂಗಿನತುರಿ – 1 ಕಪ್
ದನಿಯಾ – 1 ಚಮಚ
ಜೀರಿಗೆ – 1 ಚಮಚ
ಕಾಳುಮೆಣಸು – ಒಂದು ಚಮಚ
ಹುಣಸೆ ಹುಳಿ – ಲಿಂಬೆ ಗಾತ್ರ
ಅರಿಸಿನ ಪುಡಿ – 1ಚಮಚ
ಬೆಳ್ಳುಳ್ಳಿ – 5 ಎಸಳು
ಈರುಳ್ಳಿ – 1
ಟೊಮೆಟೊ – 1
ಶುಂಠಿ – ಚಿಕ್ಕ ತುಂಡು
ಉಪ್ಪು ರುಚಿಗೆ ತಕ್ಕಷ್ಟು
(ಮೀನಿನಲ್ಲಿ ಉಪ್ಪು ಇರುತ್ತದೆ)

**ಮಾಡುವ ವಿಧಾನ :**

ಮೊದಲಿಗೆ ಒಣಮೀನನ್ನು ನೀರಿನಲ್ಲಿ ಚೆನ್ನಾಗಿ ತೊಳೆದು, 5–10 ನಿಮಿಷಗಳ ಕಾಲ ನೀರಿನಲ್ಲಿ ನೆನೆಸಿ ಇಡಬೇಕು. ನಂತರ ಬ್ಯಾಡಗಿಮೆಣಸು, ತೆಂಗಿನತುರಿ, ದನಿಯಾ, ಜೀರಿಗೆ, ಕಾಳುಮೆಣಸು, ಹುಣಸೆ ಹುಳಿ, ಅರಿಸಿನ ಪುಡಿ ಮತ್ತು ಬೆಳ್ಳುಳ್ಳಿ ಹಾಕಿ ನುಣ್ಣಗೆ ರುಬ್ಬಿಕೊಳ್ಳಬೇಕು. ರುಬ್ಬಿಕೊಂಡ ಪದಾರ್ಥವನ್ನು ಮಣ್ಣಿನ ಪಾತ್ರೆಯಲ್ಲಿ ಹಾಕಿ ಅದಕ್ಕೆ ಹಚ್ಚಿದ ಈರುಳ್ಳಿ, ಟೊಮ್ಯಾಟೋ ಮತ್ತು ಶುಂಠಿಯನ್ನು ಹಾಕಿ 10 ನಿಮಿಷಗಳ ಕಾಲ ಚೆನ್ನಾಗಿ ಕುದಿಸಬೇಕು. ನಂತರ ಅದಕ್ಕೆ ನೆನೆಸಿದ ಒಣಮೀನು ಹಾಕಿ 5–10 ನಿಮಿಷಗಳ ಕಾಲ ಕುದಿಸಿ, ಉಪ್ಪಿನ ಅಗತ್ಯವಿದ್ದರೆ ಉಪ್ಪನ್ನು ಸೇರಿಸಿದರೆ ರುಚಿಯಾದ ಒಣಮೀನಿನ ಸಾರು ಸವಿಯಲು ಸಿದ್ಧ.

# ಪಾತ್ರೆ ತೊಳೆದ ಪಾಕಿಸ್ತಾನದ ಹಾಕಿ ಆಟಗಾರರು



ಆಸ್ಟ್ರೇಲಿಯಾ : ಆಸ್ಟ್ರೇಲಿಯಾ ಪ್ರವಾಸದಲ್ಲಿ ಪಾಕಿಸ್ತಾನದ ಹಾಕಿ ಆಟಗಾರರು ಹೋಟೆಲ್ ಬಿಲ್ ಪಾವತಿಸಲು ವಿಫಲವಾದ ಕಾರಣ ಪಾತ್ರೆ ತೊಳೆಯುವಂತಹ ಹೀನಾಯ ಸ್ಥಿತಿಯನ್ನು ಎದುರಿಸಿದ್ದಾರೆ. ಈ ಅವಮಾನಕಾರಿ ಘಟನೆಯಿಂದಾಗಿ ತಂಡದ ನಾಯಕ ಅಮ್ಮದ್ ಶಕೀಲ್ ಬಟ್, ರಾಷ್ಟ್ರೀಯ ಹಾಕಿ ಫೆಡರೇಶನ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆಸ್ಟ್ರೇಲಿಯಾದಲ್ಲಿ ಪಾಕಿಸ್ತಾನದ ಹಾಕಿ ಆಟಗಾರರು ಹೋಟೆಲ್ ಬಿಲ್ ಪಾವತಿ ಮಾಡಲು ವಿಫಲವಾಗಿದ್ದರಿಂದ ಹೋಟೆಲ್‌ನ ಕಿಚ್ ಹಾಗೂ ಪಾತ್ರೆಗಳನ್ನು ತೊಳೆದಿದ್ದಾರೆ ಎಂದು ವರದಿಯಾಗಿದೆ.

# ಭಾರತಕ್ಕೆ ಗೆಲುವು : ಬಲೂಚಿಸ್ತಾನ ಸಂಭ್ರಮಾಚರಣೆ

ಬಲೂಚಿಸ್ತಾನ : ಭಾರತ – ಪಾಕಿಸ್ತಾನ ಟಿ-20 ವಿಶ್ವಕಪ್‌ನಲ್ಲಿ ಪಾಕಿಸ್ತಾನ ತಂಡವು ಹೀನಾಯ ಸೋಲು ಅನುಭವಿಸಿದ ಬೆನ್ನಲ್ಲೇ ಪಾಕಿಸ್ತಾನದ ಬಲೂಚಿಸ್ತಾನ ಪ್ರಾಂತ್ಯ ಸಂಭ್ರಮಾಚರಣೆ ನಡೆದಿದೆ. ಈ ವಿಡಿಯೋ ಇದೀಗ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಟೀಮ್ ಇಂಡಿಯಾದ ಪ್ರಬಲ ಪ್ರದರ್ಶನಕ್ಕೆ ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದಿಂದಲೂ ಕೆಲವರು ಸಂಭ್ರಮಿಸಿರುವ ವಿಡಿಯೋ ಹಾಗೂ ಪೋಸ್ಟ್‌ಗಳು ಇದೀಗ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಇನ್ನು ಭಾರತದ ವಿರುದ್ಧ ಪಾಕಿಸ್ತಾನ ಸೋತ ಬೆನ್ನಲ್ಲೇ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಶೋಯಬ್ ಅಖ್ತರ್, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮತ್ತು ತಂಡದ ನಿರ್ವಹಣೆಯನ್ನು ತೀವ್ರವಾಗಿ ಟೀಕಿಸಿದ್ದಾರೆ.





# ಹಡಗನ್ನು ಬೆನ್ನಟ್ಟಿ ವಶಕ್ಕೆ ಪಡೆದ ಅಮೇರಿಕ



ಅಮೇರಿಕ : ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಧಿಸಿರುವ ನಿರ್ಬಂಧವನ್ನು ಧಿಕ್ಕರಿಸಲು ಪ್ರಯತ್ನಿಸಿದ್ದ ಮತ್ತೊಂದು ತೈಲ ಟ್ಯಾಂಕರ್ ಅನ್ನು ಅಮೆರಿಕಾ ಹಿಂದೂ ಮಹಾಸಾಗರದಲ್ಲಿ ತಡೆದಿರುವುದಾಗಿ ಅಮೆರಿಕಾದ ರಕ್ಷಣಾ ಇಲಾಖೆ ಹೇಳಿದೆ. ಕ್ಯಾರಿಬಿಯನ್ ಪ್ರದೇಶದಿಂದ ಬರುತ್ತಿದ್ದ ಹಡಗನ್ನು ಹಿಂದೂ ಮಹಾಸಾಗರದವರೆಗೆ ಬೆನ್ನಟ್ಟಿ ವಶಕ್ಕೆ ಪಡೆಯಲಾಗಿದೆ. ನಾವು ತಾಯ್ನಾಡನ್ನು ರಕ್ಷಿಸುವ ಕೆಲಸವನ್ನು ಮುಂದುವರಿಸುತ್ತೇವೆ. ದೂರ ಸಾಗಿದರೆ ನೀವು ತಪ್ಪಿಸಿಕೊಳ್ಳಬಹುದು ಎಂದು ಭಾವಿಸಬೇಡಿ. ಅಂತರಾಷ್ಟ್ರೀಯ ಜಲಪ್ರದೇಶಗಳು ಸುರಕ್ಷಿತ ಪ್ರದೇಶವೆಂದು ಭಾವಿಸಬೇಡಿ. ಭೂಮಿ, ವಾಯು ಅಥವಾ ಸಮುದ್ರದ ಮೂಲಕ ನಿಮ್ಮನ್ನು ನಾವು ಪತ್ತೆಹಚ್ಚಿ ನ್ಯಾಯ ಒದಗಿಸುತ್ತೇವೆ' ಎಂದು ಅಮೆರಿಕಾದ ರಕ್ಷಣಾ ಇಲಾಖೆ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದೆ.

# ಕಾರ್ಯಾಚರಣೆಗಳನ್ನು ತೀವ್ರಗೊಳಿಸಿದ ಅಮೆರಿಕ

ಸಿರಿಯಾ : ಸಿರಿಯಾದಲ್ಲಿ ಇಸ್ಲಾಮಿಕ್ ಸ್ಟೇಟ್ (ISIS) ಗುರಿಗಳ ವಿರುದ್ಧ ಅಮೆರಿಕ ತನ್ನ ಮಿಲಿಟರಿ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿದೆ. ಯುಎಸ್ ಸೆಂಟ್ರಲ್ ಕಮಾಂಡ್ 'ಆಪರೇಷನ್ ಹಾಕೈ ಸ್ಟ್ರೈಕ್' ಅಡಿಯಲ್ಲಿ ನಡೆಯುತ್ತಿರುವ ಕಾರ್ಯಾಚರಣೆಯ ಕುರಿತು ಹೊಸ ವೀಡಿಯೊ ಮತ್ತು ಮಾಹಿತಿಯನ್ನು ಬಿಡುಗಡೆ ಮಾಡಿದೆ. ಡಿಸೆಂಬರ್‌ನಲ್ಲಿ ಪಾಲ್ಮಿರಾದಲ್ಲಿ ನಡೆದ ದಾಳಿಯ ನಂತರ ಈ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು, ಇದರಲ್ಲಿ ಇಬ್ಬರು ಅಮೇರಿಕನ್ ಸೈನಿಕರು ಮತ್ತು ಒಬ್ಬ ಅಮೇರಿಕನ್ ಇಂಟರ್ಪ್ರಿಟರ್ ಸಾವನ್ನಪ್ಪಿದರು. ತನ್ನ ಪಡೆಗಳ ಮೇಲಿನ ದಾಳಿಗಳನ್ನು ಬಲದಿಂದ ಎದುರಿಸಲಾಗುವುದು ಎಂದು ಅಮೆರಿಕ ಸ್ಪಷ್ಟವಾಗಿ ಹೇಳಿದೆ.



# ಜಗತ್ತಿನ ಆತಂಕಕ್ಕೆ ಕಾರಣವಾದ "ಆಂಥ್ರೋಪಿಕ್"!



ಅಮೇರಿಕ : ಅಮೆರಿಕ ಮೂಲದ ಪ್ರಸಿದ್ಧ ಎಐ ಸ್ಟಾರ್ಟ್‌ಅಪ್ 'ಆಂಥ್ರೋಪಿಕ್' ಇತ್ತೀಚೆಗೆ ಬಿಡುಗಡೆ ಮಾಡಿದ ಹೊಸ ಎಐ ಟೂಲ್ ಈ ಎಲ್ಲಾ ಗದ್ದಲಗಳಿಗೆ ಕೇಂದ್ರಬಿಂದುವಾಗಿದೆ. ಈ ತಂತ್ರಜ್ಞಾನವು ಕೇವಲ ಚಾಟ್ ಮಾಡುವುದಕ್ಕೆ ಸೀಮಿತವಾಗದೆ, ಕಾರ್ಪೊರೇಟ್ ಕಂಪನಿಗಳ ಕಾನೂನು ಪಾಲನೆ, ಸಂಕೀರ್ಣ ಕಾಂಟ್ರ್ಯಾಕ್ಟ್‌ಗಳ ಪರಿಶೀಲನೆ ಮತ್ತು ಡೇಟಾ ವಿಶ್ಲೇಷಣೆಯಂತಹ ಗಂಭೀರ ಕೆಲಸಗಳನ್ನು ಮನುಷ್ಯರಿಗಿಂತ ವೇಗವಾಗಿ ಮತ್ತು ನಿಖರವಾಗಿ ಮಾಡಬಲ್ಲದು. ಈ ಬೆಳವಣಿಗೆಯು ಭಾರತದಂತಹ ದೇಶಗಳ ಮೇಲೆ ಅವಲಂಬಿತವಾಗಿರುವ ಜಾಗತಿಕ 'ಐಟಿ ಔಟ್‌ಸೋರ್ಸಿಂಗ್' ಉದ್ಯಮದ ಅಡಿಪಾಯವನ್ನೇ ಅಲುಗಾಡಿಸಬಹುದು ಎಂಬ ಭೀತಿ ಹೂಡಿಕೆದಾರರಲ್ಲಿ ಮೂಡಿದೆ.

# ಸೂಪರ್ 8ಕ್ಕೆ ಅರ್ಹತೆ ಪಡೆದ ಭಾರತ ತಂಡ

ಕೊಲಂಬೋ: ಭಾರತ ವಿರುದ್ಧದ ವಿಶ್ವಕಪ್ ಪಂದ್ಯ ಬಹಿಷ್ಕರಿಸುವ ನಾಟಕವಾಡಿದ್ದ ಪಾಕಿಸ್ತಾನ ಭಾರೀ ಮುಖಭಂಗ ಅನುಭವಿಸಿದೆ. ಕೊಲಂಬೊದ ಆರ್ ಪ್ರೇಮದಾಸ್ ಮೈದಾನದಲ್ಲಿ ನಡೆದಿದ್ದ ಟಿ20 ವಿಶ್ವಕಪ್‌ನ 27ನೇ ಪಂದ್ಯದಲ್ಲಿ ಟೀಮ್ ಇಂಡಿಯಾ ವಿರುದ್ಧ ಹೀನಾಯ ಸೋಲನ್ನು ಕಂಡಿದೆ. ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದದ್ದ ಟೀಮ್ ಇಂಡಿಯಾ ಇಶಾನ್ ಕಿಶಾನ್ ಅವರ ಸ್ಫೋಟಕ ಬ್ಯಾಟಿಂಗ್ ನೆರವಿನಿಂದ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 175 ರನ್ ಕಲೆಹಾಕಿತು. ಈ ಬೃಹತ್ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ ಭಾರತ ಬೌಲಿಂಗ್ ದಾಳಿಗೆ ಸಿಲುಕಿ 114 ರನ್‌ಗಳಿಗೆ ಆಲೌಟ್ ಆಗಿದೆ.




# ಪಾಕಿಸ್ತಾನವನ್ನು ಆಲೌಟ್ ಮಾಡಿ ಗೆದ್ದು ಬೀಗಿದ ಭಾರತ





ಬ್ಯಾಂಕಾಕ್ : ಇಲ್ಲಿ ನಡೆದ ಮಹಿಳಾ ರೈಸಿಂಗ್ ಸ್ಟಾರ್ಸ್ ಏಷ್ಯಾಕಪ್‌ನಲ್ಲಿ (WRS Asia Cup) ಪಾಕಿಸ್ತಾನ ತಂಡವನ್ನು ಎಂಟು ವಿಕೆಟ್‌ಗಳಿಂದ ಸೋಲಿಸಿದ ಭಾರತ ಮಹಿಳಾ ತಂಡ ದಾಖಲೆಯ ಗೆಲುವು ದಾಖಲಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಪಾಕಿಸ್ತಾನ ಮೊದಲು ಬ್ಯಾಟಿಂಗ್ ಮಾಡಿ ಕೇವಲ 93 ರನ್‌ಗಳಿಗೆ ಆಲೌಟ್ ಆಯಿತು. ಪಾಕಿಸ್ತಾನ ತಂಡದ ಪರ ಕೇವಲ ಮೂವರು ಆಟಗಾರ್ತಿಯರಿಗೆ ಮಾತ್ರ ಎರಡಂಕಿ ಮೊತ್ತ ಕಲೆಹಾಕಲು ಸಾಧ್ಯವಾಯಿತು. ಈ ಗುರಿ ಬೆನ್ನಟ್ಟಿದ ಭಾರತ ತಂಡ ಕೇವಲ 2 ವಿಕೆಟ್ ಕಳೆದುಕೊಂಡು ಜಯದ ನಗೆ ಬೀರಿತು. ಭಾರತದ ಈ ಗೆಲುವಿನಲ್ಲಿ ಕನ್ನಡತಿ ವೃಂದಾ ದಿನೇಶ್ ಅವರ ಅರ್ಧಶತಕ ಪ್ರಮುಖ ಪಾತ್ರವಹಿಸಿತು.

# ರಾಜ್ಯದ ಶಕ್ತಿ ಸೌಧ ವಿಧಾನಸೌಧಕ್ಕೆ ಮಾಧ್ಯಮಗಳಿಗೆ ನಿರ್ಬಂಧ!





ಬೆಂಗಳೂರು : ರಾಜ್ಯದ ಶಕ್ತಿ ಸೌಧ ವಿಧಾನಸೌಧಕ್ಕೆ ಮಾಧ್ಯಮಗಳಿಗೆ ನಿರ್ಬಂಧ ಹೇರಲಾಗಿದೆ. ಇತ್ತೀಚೆಗೆ ಸಚಿವ ಬೈರತಿ ಸುರೇಶ್ ಅವರ ಕಚೇರಿಯಲ್ಲಿ ಕಳ್ಳತನ ಪ್ರಕರಣ ನಡೆದಿತ್ತು. ನಗದು ಮತ್ತು 300ಗ್ರಾಂ ಚಿನ್ನ ಕಳ್ಳತನವಾಗಿತ್ತು. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸಿಬ್ಬಂದಿ ಈ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿರುವುದು ಬಹಿರಂಗವಾಗಿತ್ತು. ಶಕ್ತಿ ಸೌಧದಲ್ಲಿ ಭದ್ರತಾ ಲೋಪದ ಬಗ್ಗೆಯೂ ಮಾಧ್ಯಮಗಳಲ್ಲಿ ವರದಿ ಪ್ರಸಾರ ಆಗಿತ್ತು. ಈ ಘಟನೆಯ ಬೆನ್ನಲ್ಲೇ ಮಾಧ್ಯಮಗಳಿಗೆ ಮೂಗುದಾರ ಹಾಕಲು ಸರ್ಕಾರ ಮುಂದಾಗಿದೆ.

# ತನ್ನ ಅಭಿಪ್ರಾಯವನ್ನು ಸಮರ್ಥಿಸಿಕೊಂಡ ಪ್ರಿಯಾಂಕ್ ಖರ್ಗೆ

ಬೆಂಗಳೂರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಷ್ಟ್ರೀಯ ಸ್ವಯಂಸೇವಕ ಸಂಘ (RSS) ಕುರಿತು ನೀಡಿದ ತಮ್ಮ ಹೇಳಿಕೆಗಳನ್ನು ಹಾಗೂ ಕರಾವಳಿ ಕರ್ನಾಟಕದಲ್ಲಿ ಸಾಮುದಾಯಿಕ ಉದ್ವಿಗ್ನತೆ ಹೂಡಿಕೆಗಳ ಮೇಲೆ ಪರಿಣಾಮ ಬೀರುತ್ತಿದೆ ಎಂಬ ತಮ್ಮ ಅಭಿಪ್ರಾಯವನ್ನು ಸಮರ್ಥಿಸಿಕೊಂಡರು. ಆರ್‌ಎಸ್‌ಎಸ್ ಸಂಬಂಧಿತ ಕಾನೂನು ನೋಂದಣಿ ವಿಚಾರವನ್ನು ಪ್ರಸ್ತಾಪಿಸಿದ ಪ್ರಿಯಾಂಕ್ ಖರ್ಗೆ, ಸಂಸ್ಥೆ ದೇಣಿಗೆಗಳನ್ನು ಸ್ವೀಕರಿಸುತ್ತಿದ್ದರೂ ಸಂಬಂಧಿತ ಕಾನೂನುಗಳಡಿ ನೋಂದಾಯಿತವಾಗಿಲ್ಲ ಎಂದು ಹೇಳಿದರು.



# ಮೆಣಸಿನಕಾಯಿ ಐತಿಹಾಸಿಕ ಬೆಲೆಗೆ ಮಾರಾಟವಾಗಿ ದಾಖಲೆ !

ಬ್ಯಾಡಗಿ : ಅಂತಾರಾಷ್ಟ್ರೀಯ ಖ್ಯಾತಿಯ ಬ್ಯಾಡಗಿ ಮೆಣಸಿನಕಾಯಿ ಮಾರುಕಟ್ಟೆಯಲ್ಲಿ ಡಬ್ಬಿ ಮೆಣಸಿನಕಾಯಿ ಪ್ರತಿ ಕ್ವಿಂಟಲ್‌ಗೆ 89, 999ರೂ. ಹಾಗೂ ಕಡ್ಡಿ ಮೆಣಸಿನಕಾಯಿ 69, 999 ರೂ. ಐತಿಹಾಸಿಕ ಬೆಲೆಗೆ ಮಾರಾಟವಾಗಿ ದಾಖಲೆ ನಿರ್ಮಿಸಿದೆ. ರೋಣ ತಾಲೂಕಿನ ಸವಡಿ ಗ್ರಾಮದ ರೈತ ವಿಜಯಕುಮಾರ ಪ್ರಕಾಶ ಸಜ್ಜನರ ಬೆಳೆದ ಡಬ್ಬಿ ಹಾಗೂ ಕಡ್ಡಿ ಮೆಣಸಿನಕಾಯಿಗೆ ಈ ದರ ದೊರೆತಿದೆ. 23 ವರ್ಷದ ಪದವೀಧರ ಯುವ ರೈತ ಸಜ್ಜನರ ಮೊದಲ ಪ್ರಯತ್ನದಲ್ಲೇ ಭರ್ಜರಿ ಇಳುವರಿ ತೆಗೆದು ಸೈ ಎನಿಸಿಕೊಂಡಿದ್ದಾರೆ. ಮೆಣಸಿನಕಾಯಿ ಗುಣಮಟ್ಟದಿಂದಾಗಿ ಬಂಗಾರದ ಬೆಲೆ ದೊರೆತಿದೆ ಎಂದು ವರದಿಯಾಗಿದೆ.



# ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಲಗೇಜ್‌ಗೆ ನೂತನ ಪರಿಷ್ಕೃತ ದರ ಜಾರಿ

ಬೆಂಗಳೂರು : ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರಯಾಣಿಕ ರಹಿತವಾಗಿ ಸಾಗಿಸುವ ಲಗೇಜ್ ದರ ಏರಿಕೆ ಮಾಡಲಾಗಿದೆ. ಈ ಬಗ್ಗೆ ಕೆಎಸ್‌ಆರ್‌ಟಿಸಿ ಎಂಡಿ ಅಕ್ರಂ ಪಾಷಾರಿಂದ ಮಾಹಿತಿ ನೀಡಿದ್ದು, ಫೆಬ್ರವರಿ 16 ರಿಂದ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರಯಾಣಿಕ ರಹಿತವಾಗಿ ಸಾಗಿಸುವ ಲಗೇಜ್‌ಗೆ ನೂತನ ಪರಿಷ್ಕೃತ ದರ ಜಾರಿಗೆಯಾಗಲಿದೆ ಎಂದು ಆದೇಶ ಹೊರಡಿಸಿದ್ದಾರೆ. ಡಿಸೇಲ್, ಸಿಬ್ಬಂದಿ ಹಾಗೂ ಇತರೆ ಖರ್ಚುಗಳ ಹಿನ್ನೆಲೆ ಲಗೇಜ್ ದರ ಏರಿಕೆ ಮಾಡಲಾಗಿದೆ. ಈ ಮೊದಲು 2021ರಲ್ಲಿ ಲಗೇಜ್ ದರ ಏರಿಕೆಯಾಗಿತ್ತು. ಅದಾದ ಬಳಿಕ ಟಿಕೆಟ್ ದರ ಪರಿಷ್ಕರಣೆ ಆದಾಗ ಲಗೇಜ್ ದರ ಏರಿಕೆಯಾಗಿರಲಿಲ್ಲ.






# ಸ್ವಂತ ತೆರಿಗೆ ಮೂಲಗಳಿಂದ ಆದಾಯ ಸಂಗ್ರಹವಾಗುವುದು ಕಷ್ಟಸಾಧ್ಯ!



ಬೆಂಗಳೂರು: ಪ್ರಸಕ್ತ 2025–26ನೇ ಆರ್ಥಿಕ ವರ್ಷಕ್ಕೆ ದಾಖಲೆಯ 4.09 ಲಕ್ಷ ಕೋಟಿ ರೂ. ಮೊತ್ತದ ಬಜೆಟ್ ಮಂಡನೆಯಾಗಿದ್ದರೂ ಸರಕಾರದ ಸ್ವಂತ ತೆರಿಗೆ ಮೂಲಗಳಿಂದ ವಾರ್ಷಿಕ ಗುರಿಯಷ್ಟು ಆದಾಯ ಸಂಗ್ರಹವಾಗುವುದು ಕಷ್ಟಸಾಧ್ಯವೆನಿಸಿದೆ. ಗುರಿ ತಲುಪಲು ಮಾರ್ಚ್ ಅಂತ್ಯದೊಳಗೆ 48,306 ಕೋಟಿ ರೂ.ಸಂಗ್ರಹವಾಗಬೇಕಿದ್ದು, ಅಬಕಾರಿ ಇಲಾಖೆ ಹೊರತುಪಡಿಸಿ ಉಳಿದ ಮೂರು ಮೂಲಗಳಿಂದ ವಾರ್ಷಿಕ ಗುರಿ ಸಾಧನೆ ಅನುಮಾನವೆನಿಸಿದೆ. ತೆರಿಗೆ ಆದಾಯ ತಗ್ಗಿದರೆ ಅಭಿವೃದ್ಧಿ ಯೋಜನೆಗಳಿಗೆ ಬಳಕೆಯಾಗುವ ಅನುದಾನ ಕಡಿತವಾಗಲಿದೆ ಎಂದು ಸರಕಾರದ ಮೂಲಗಳಿಂದ ತಿಳಿದು ಬಂದಿದೆ.

# ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನವನ್ನು ಬಿಡುಗಡಗೆ ಮನವಿ!

ಬೆಂಗಳೂರು : ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿರುವ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕೆಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ. ನವದೆಹಲಿಯ ಸಂಸತ್ ಭವನದಲ್ಲಿ ನಡೆದ ಭೇಟಿಯಲ್ಲಿ, ಕರ್ನಾಟಕದ ರೈತರು ಎದುರಿಸುತ್ತಿರುವ ನೀರಾವರಿ ತೊಂದರೆಗಳ ಕುರಿತು ಚರ್ಚೆ ನಡೆಸಲಾಗಿದೆ. ಯೋಜನೆಗೆ ಸಂಬಂಧಿಸಿದ ಪರಿಷ್ಕೃತ ಪ್ರಸ್ತಾವನೆಗೆ ಕೇಂದ್ರದ ಅನುಮೋದನೆ ದೊರಕುವಂತೆ ಪ್ರಯತ್ನಿಸಲಾಗುವುದು ಎಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಹೇಳಿದ್ದಾರೆ.




# ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದ ಚುನಾವಣಾ ಆಯೋಗ

ನವದೆಹಲಿ : ಭಾರತದ ರಾಜ್ಯಸಭಾ ಸದಸ್ಯರನ್ನು ಆಯ್ಕೆ ಮಾಡುವ ಪ್ರಮುಖ ಪ್ರಕ್ರಿಯೆ ಮತ್ತೆ ಆರಂಭವಾಗಿದೆ. ಭಾರತೀಯ ಚುನಾವಣಾ ಆಯೋಗವು 10 ರಾಜ್ಯಗಳಲ್ಲಿ ಖಾಲಿಯಾಗುತ್ತಿರುವ 37 ಸ್ಥಾನಗಳಿಗೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಈ ಸ್ಥಾನಗಳು ಏಪ್ರಿಲ್ 2026ರಲ್ಲಿ ಖಾಲಿಯಾಗಲಿವೆ. ಈ ಚುನಾವಣೆ ಸಾಮಾನ್ಯ ಜನರು ನೇರವಾಗಿ ಮತಹಾಕುವ ರೀತಿಯಲ್ಲಿಲ್ಲ. ರಾಜ್ಯ ವಿಧಾನಸಭೆಯ ಶಾಸಕರು ಮತದಾನ ಮಾಡಿ ಸದಸ್ಯರನ್ನು ಆಯ್ಕೆ ಮಾಡುತ್ತಾರೆ. ಒಟ್ಟು 245 ಸದಸ್ಯರ ಮೇಲ್ಮನೆಗಳಲ್ಲಿ 233 ಮಂದಿ ಆಯ್ಕೆಯಾಗಿರುವವರು. ಪ್ರತಿಆರು ವರ್ಷಕ್ಕೊಮ್ಮೆ ಕೆಲ ಸದಸ್ಯರು ನಿವೃತ್ತರಾಗುತ್ತಾರೆ. ಅದಕ್ಕೆ ಈ ಚುನಾವಣೆ ನಡೆಯುತ್ತಿದೆ.



# ಮುಸ್ಲಿಂಮರ ಮೀಸಲಾತಿಯನ್ನು ರದ್ದುಗೊಳಿಸಿದ ಮಹಾರಾಷ್ಟ್ರ ಸರ್ಕಾರ!

ಮುಂಬೈ : ಉದ್ಯೋಗ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಮುಸ್ಲಿಂ ಸಮುದಾಯಕ್ಕೆ ನೀಡಲಾಗಿದ್ದ ಶೇ5ರಷ್ಟು ಮೀಸಲಾತಿಯನ್ನು ಮಹಾರಾಷ್ಟ್ರ ಸರ್ಕಾರ ರದ್ದುಗೊಳಿಸಿದೆ. ಈ ಬಗ್ಗೆ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಮುಸ್ಲಿಂ ಸಮುದಾಯಕ್ಕೆ ನೀಡಲಾಗಿದ್ದ ಶೇ 5ರಷ್ಟು ಮೀಸಲಾತಿ ಅಧಿಸೂಚನೆಗೆ ಸಂಬಂಧಿಸಿದಂತೆ ನ್ಯಾಯಾಲ ಯ ಮಧ್ಯಂತರ ತಡೆ ನೀಡಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸರ್ಕಾರ ತಿಳಿಸಿದೆ. ಹಿಂದಿನ 'ಮಹಾ ವಿಕಾಸ್ ಆಘಾಡಿ' ಸರ್ಕಾರ ಮರಾಠ ಸಮುದಾಯಕ್ಕೆ ಶೇ.16 ಮತ್ತು ಮುಸ್ಲಿಂ ಸಮುದಾಯಕ್ಕೆ ಶೇ. 5ರಷ್ಟು ಮೀಸಲಾತಿ ನೀಡಿತ್ತು.



# ಪಾಕಿಸ್ತಾನದ ಪರಮಾಣು ಕೇಂದ್ರಕ್ಕೆ ದಾಳಿ ನಡೆಸಿದೆ : ಟಾಮ್ ಕೂಪರ್



ನವದೆಹಲಿ : "ಆಪರೇಷನ್ ಸಿಂಧೂರ" ಸಮಯದಲ್ಲಿ ಭಾರತವು ಪಾಕಿಸ್ತಾನದ ಕಿರಣಾ ಹಿಲ್ಸ್ ಪರಮಾಣು ಕೇಂದ್ರದ ಮೇಲೆ ದಾಳಿ ನಡೆಸಿದೆ ಎಂದು ವಾಯುಯಾನ ಇತಿಹಾಸಕಾರ ಮತ್ತು ವಿಶ್ಲೇಷಕ ಟಾಮ್ ಕೂಪರ್ ಅವರು ಪ್ರತಿಪಾದಿಸಿದ್ದಾರೆ. ಮಧ್ಯಮವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು ಸ್ಫೋಟಕ ಮಾಹಿತಿಗಳನ್ನು ಹಂಚಿಕೊಂಡಿದ್ದಾರೆ. ಕೂಪರ್ ಅವರ ಪ್ರಕಾರ, ಈ ದಾಳಿಯು ಕೇವಲ ಮಿಲಿಟರಿ ಕಾರ್ಯಾಚರಣೆಯಾಗಿರದೆ, ಪಾಕಿಸ್ತಾನಕ್ಕೆ ನೀಡಿದ ಬಲವಾದ ಕಾರ್ಯತಂತ್ರದ ಸಂದೇಶವಾಗಿತ್ತು. "ಹೆಚ್ಚಿನ ಹಾನಿ ಮಾಡದೆಯೇ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಲು ಇಂತಹ ಸ್ಥಳವನ್ನು ಆರಿಸಿಕೊಳ್ಳಲಾಗುತ್ತದೆ ಎಂದರು.


# "ಯುವ ಸಾಥಿ" ಘೋಷಿಸಿದ ಮಮತಾ ಬ್ಯಾನರ್ಜಿ

ಕೋಲ್ಕತ್ತಾ : ಬಿಹಾರ ಚುನಾವಣೆಯಲ್ಲಿ ನಿತೀಶ್ ಕುಮಾರ್ ಅವರ ಗೆಲುವಿನಿಂದ ಪಾಠ ಕಲಿತು, ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮತ್ತು ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಒಂದು ಪ್ರಮುಖ ಹೆಜ್ಜೆ ಇಟ್ಟಿದ್ದಾರೆ. ಬಂಗಾಳ ವಿಧಾನಸಭಾ ಚುನಾವಣೆಗೆ ಮುನ್ನ ನಿರುದ್ಯೋಗಿ ಯುವಕರನ್ನು ಸಜ್ಜುಗೊಳಿಸಲು ಅವರು "ಯುವ ಸಾಥಿ" ಯೋಜನೆಯನ್ನು ಪ್ರಾರಂಭಿಸಿದ್ದಾರೆ. ಈ ಯೋಜನೆಯಡಿಯಲ್ಲಿ, ಹತ್ತನೇ ತರಗತಿಗಿಂತ ಹೆಚ್ಚು ಓದದ 21 ರಿಂದ 40 ವರ್ಷ ವಯಸ್ಸಿನ ನಿರುದ್ಯೋಗಿ ಯುವಕರಿಗೆ ತಿಂಗಳಿಗೆ 1,500 ರೂ.ಗಳನ್ನು ಒದಗಿಸುವ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ಪ್ರಾರಂಭಿಸಲಾಗಿದೆ.



# ಅಲಹಾಬಾದ್ ಹೈಕೋರ್ಟ್ ಆದೇಶ ರದ್ದುಗೊಳಿಸಿದ ಸುಪ್ರೀಂ

ನವದೆಹಲಿ: ಮಹಿಳೆಯರ ಸ್ತನಗಳನ್ನು ಹಿಡಿದು ಪೈಜಾಮಾ ಲಾಡಿ ಬಿಚ್ಚುವುದು "ಅತ್ಯಾಚಾರ ಯತ್ನವಲ್ಲ" ಎಂದು ವಿವಾದಾತ್ಮಕ ತೀರ್ಪು ನೀಡಿದ್ದ ಅಲಹಾಬಾದ್ ಹೈಕೋರ್ಟ್ ಆದೇಶವನ್ನು ಸುಪ್ರೀಂಕೋರ್ಟ್ ರದ್ದುಗೊಳಿಸಿದೆ. ಪೀಠವು "ಕ್ರಿಮಿನಲ್ ನ್ಯಾಯಶಾಸ್ತ್ರದ ಸ್ಥಿರ ತತ್ವಗಳ ತಪ್ಪಾದ ಅನ್ವಯ"ದ ಕಾರಣದಿಂದಾಗಿ ಈ ಆಕ್ಷೇಪಾರ್ಹ ಆದೇಶವನ್ನು ರದ್ದುಗೊಳಿಸಲಾಗಿದೆ ಎಂದು ಹೇಳಿದೆ. "ಲೈಂಗಿಕ ಅಪರಾಧ ಪ್ರಕರಣಗಳ ನ್ಯಾಯದಾನವು ಕೇವಲ ಕಾನೂನಿನ ಚೌಕಟ್ಟಿಗೆ ಸೀಮಿತವಾಗಿರದೆ, ಅದು ಸಂವೇದನಾಶೀಲತೆ ಮತ್ತು ಸಹಾನುಭೂತಿಯಿಂದ ಕೂಡಿರಬೇಕು" ಎಂದು ಸುಪ್ರೀಂಕೋರ್ಟ್, ಅಲಹಾಬಾದ್ ಹೈಕೋರ್ಟ್ ಅನ್ನು ತರಾಟೆಗೆ ತೆಗೆದುಕೊಂಡಿದೆ.





# ಕೆಲಸಗಳು ನನಗೆ ತೃಪ್ತಿ ಮಾಡಿಲ್ಲ : ಪ್ರಧಾನಿ ಮೋದಿ

ನವದೆಹಲಿ: ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಯಾವುದೇ ಜನಪ್ರಿಯ ಘೋಷಣೆಗಳನ್ನು ಮಾಡಲಿಲ್ಲ. ಬದಲಿಗೆ ನಮ್ಮ ಗಮನ ಉದ್ಯೋಗ ಸೃಷ್ಟಿ ಮತ್ತು ಸುಸ್ಥಿರ ಬೆಳವಣಿಗೆಗೆ ಮೂಲ ಸೌಕರ್ಯ ಅಭಿವೃದ್ಧಿಯತ್ತ ಕೇಂದ್ರೀಕೃತವಾಗಿತ್ತು. ಇದು ಅಭಿವೃದ್ಧಿ ಹೊಂದಿದ ದೇಶ ನಿರ್ಮಾಣದ ಬುನಾದಿಯಾಗಿದೆ. ಇದು ನಮ್ಮ ಆಡಳಿತ ಶೈಲಿ ಮತ್ತು ಆದ್ಯತೆಗಳ ಪ್ರತೀಕ' ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ.





ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಪ್ರಜ್ವಲ್ ದೇವರಾಜ್ ಅಭಿನಯದ 'ಚೀತಾ' ಚಿತ್ರದ ಚಿತ್ರೀಕರಣ ಪೂರ್ಣ

ರಾಜಲಕ್ಷ್ಮಿ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಶ್ರೀಮತಿ ಪ್ರತಿಭಾ ನಿರ್ಮಿಸುತ್ತಿರುವ, ನೃತ್ಯ ನಿರ್ದೇಶಕ ರಾಜಾ ಕಲೈ ಕುಮಾರ್ ಪ್ರಥಮ ನಿರ್ದೇಶನದ ಹಾಗೂ ಪ್ರಜ್ವಲ್ ದೇವರಾಜ್ – ಮೇಘ ಶೆಟ್ಟಿ ನಾಯಕ – ನಾಯಕಿಯಾಗಿ ನಟಿಸಿರುವ 'ಚೀತಾ' ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ರಾಕ್ಲೈನ್ ಸ್ಟುಡಿಯೋದಲ್ಲಿ ನಿರ್ಮಿಸಲಾಗಿದ್ದ ಅದ್ದೂರಿ ಸೆಟ್‌ನಲ್ಲಿ ಪ್ರಜ್ವಲ್ ದೇವರಾಜ್ ಹಾಗೂ ಮೇಘ ಶೆಟ್ಟಿ ಅಭಿನಯದಲ್ಲಿ ಮೂಡಿಬಂದ ಯುಗಳಗೀತೆಯೊಂದರ ಚಿತ್ರೀಕರಣದೊಂದಿಗೆ ಈ ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದೆ. ಅಂತಿಮ ದಿನದ ಚಿತ್ರೀಕರಣದ ದಿನ ಮಾಧ್ಯಮದವರನ್ನು ಚಿತ್ರೀಕರಣದ ಸ್ಥಳಕ್ಕೆ ಆಹ್ವಾನಿಸಿದ್ದ ಚಿತ್ರತಂಡ ಅದೇ ಸ್ಥಳದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಚಿತ್ರದ ಕುರಿತು ಮಾಹಿತಿ ನೀಡಿದರು. ನಾನು ಚಿತ್ರರಂಗಕ್ಕೆ ಬಂದು 25 ವರ್ಷಗಳಾಯಿತು. ನೃತ್ಯ ಕಲಾವಿದನಾಗಿ, ನೃತ್ಯ ನಿರ್ದೇಶಕನಾಗಿ ಕಾರ್ಯ ನಿರ್ವಹಿಸಿದ್ದೇನೆ ಎಂದು ಮಾತನಾಡಿದ ನಿರ್ದೇಶಕ ರಾಜಾ ಕಲೈ ಕುಮಾರ್, ಇದು ನನ್ನ ನಿರ್ದೇಶನದ ಮೊದಲ ಚಿತ್ರ. 'ಚೀತಾ', ಮಾರ್ಕೆಟ್‌ನಲ್ಲೇ ನಡೆಯುವ ಕಥೆ. ಮಾರುಕಟ್ಟೆಯಲ್ಲೇ ಹುಟ್ಟಿಬೆಳೆದ ಹುಡುಗನೊಬ್ಬನ ಕಥೆ ಕೂಡ. ಆ ಹುಡುಗನ ಪಾತ್ರದಲ್ಲಿ ಪ್ರಜ್ವಲ್ ಅವರು ಅಭಿನಯಿಸಿದ್ದಾರೆ. ಮಾರುಕಟ್ಟೆಯಲ್ಲಿ ನಡೆಯುವ ಅವ್ಯವಹಾರಗಳ ವಿರುದ್ಧ ಹೋರಾಟ ಮಾಡುವ ಹೋರಾಟಗಾರನ ಪಾತ್ರ ಅವರದು. ನಮ್ಮ ಚಿತ್ರದಲ್ಲಿ ಪ್ರೀತಿ, ಸೆಂಟಿಮೆಂಟ್ ಹೀಗೆ ಜನರಿಗೆ ಬೇಕಾಗುವ ಎಲ್ಲಾ ರೀತಿಯ ಅಂಶಗಳು ಇದೆ. ಇದು ಮಾರ್ಕೇಟ್‌ನಲ್ಲೇ ನಡೆಯುವ ಕಥೆಯಾಗಿರುವುದರಿಂದ ಕಲಾ ನಿರ್ದೇಶಕ ಶಿವಕುಮಾರ್ ಅವರ ನೇತೃತ್ವದಲ್ಲಿ ಹೆಚ್‌ಎಂಟಿ ಆವರಣದಲ್ಲಿ ಬೃಹತ್ ಸೆಟ್ ಹಾಕಿ ಅಲ್ಲೇ ಹೆಚ್ಚಿನ ಚಿತ್ರೀಕರಣ ನಡೆದಿದೆ. ಸುಮಾರು 150ರಿಂದ 200ಜನ ಸಹ ಕಲಾವಿದರು ಪ್ರತಿ ದಿನ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದರು. ಪ್ರಜ್ವಲ್ ದೇವರಾಜ್, ಮೇಘ ಶೆಟ್ಟಿ, ರಂಗಾಯಣ ರಘು, ಶೃತಿ ಹರಿಹರನ್, ಚೆನ್ನಿಪ್ರಕಾಶ್, ಗುರು ಜಗ್ಗೇಶ್, ಶಿವರಾಜ ಕೆ.ಆರ್ ಪೇಟೆ, ಸುನೀಲ್(ತೆಲುಗು), ಶ್ರೀಧರ್, ಬಲರಾಜ್ ವಾಡಿ, ಟೆನ್ನಿಸ್ ಕೃಷ್ಣ ಮುಂತಾದವರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ.



## ಶಿವನ ಮತ್ತೊಂದು ಹೆಸರೇ ತ್ರಿಕಾರಂ

'ತ್ರಿಕಾರಂ' ಚಿತ್ರದ ಮೊದಲ ಹಾಡು ವೈರಲ್ ಆಗಿದ್ದರಿಂದ ತಂಡಕ್ಕೆ ಸಂತಸ ತಂದಿತ್ತು. ಇದರ ಪ್ರೇರಣೆಯಿಂದಲೇ, ಈಗ ಪ್ರೇಮಿಗಳ ದಿನಾಚರಣೆ ಅಂಗವಾಗಿ, ಎರಡನೇ ಹಾಡಿನ ಬಿಡುಗಡೆ ಕಾರ್ಯಕ್ರಮ ಉತ್ಸವ್ ಲೆಗೆಸಿಯಲ್ಲಿ ಅದ್ದೂರಿಯಾಗಿ ನಡೆಯಿತು. ರಾಜಕೀಯ ಧುರೀಣ ರವೀಂದ್ರ ಮತ್ತು ನಟ ಶಿವರಾಜ್.ಕೆ.ಆರ್.ಪೇಟೆ ಹಾಗೂ ನಿರ್ದೇಶಕ ಖದರ್ ಕುಮಾರ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ತಂಡಕ್ಕೆ ಶುಭ ಹಾರೈಸಿದರು. ಪಿನ್2ಪಿನ್ ಮ್ಯೂಸಿಕ್ ಸಂಸ್ಥೆಯಿಂದ ಹೊರಬಂದಿರುವ 'ಸೀದಾ ನಿಂತರೂ ಲೋಕ ಯಾಕೆ ಉಲ್ಟ ಕಾಣ್ತದೆ' ಸಾಲಿನ ಗೀತೆಗೆ ಕೇಶು-ಚೇತನ್ ಬರವಣಿಗೆ, ರಾಜೇಶ್ ಕೃಷ್ಣನ್ ಧ್ವನಿಗೆ, ವಿವೇಕ್ ಚಕ್ರವರ್ತಿ ಸಂಗೀತ ಸಂಯೋಜಿಸಿದ್ದಾರೆ. 'ಇದು ಸ್ಮಶಾನ ಅಲ್ಲ' ಎಂಬ ಅಡಿಬರಹ ಇದೆ. ನಾಟಕ ಪ್ರೇಮಿ ಜಿ.ಗಣೇಶ್ ಮೂರ್ತಿ ಅವರು ಸದ್ಗುರು ಸಿನಿ ಪ್ರೊಡಕ್ಷನ್ ಅಡಿಯಲ್ಲಿ ನಿರ್ಮಾಣ ಮಾಡುವುದರ ಜತೆಗೆ ಖತರ್‌ನಾಕ್ ಖಳನಾಯಕನ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಹಲವು ನಿರ್ದೇಶಕರ ಬಳಿ ಕೆಲಸ ಕಲಿತಿರುವ ಅಜ್ಜಂಪುರದ ದಿಲೀಪ್ ಕುಮಾರ್.ಜೆ.ಆರ್ ಬಡ್ತಿ ಎನ್ನುವಂತೆ ರಚಿಸಿ, ಆಕ್ಷನ್ ಕಟ್ ಹೇಳಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು, ದೈವ ಮತ್ತು ದುಷ್ಟ ನಡುವಿನ ಹೋರಾಟ ಕಥೆಯು ಸಸ್ಪೆನ್ಸ್ ಥ್ರಿಲ್ಲರ್ ಮಾದರಿಯಲ್ಲಿ ಸಾಗುತ್ತದೆ. ಅದು ಯಾವ ರೀತಿಯ ಹೋರಾಟ, ಯಾತಕ್ಕಾಗಿ? ಶಿವನನ್ನು ತ್ರಿಕಾರಂ ಅಂತಲೂ ಕರೆಯುತ್ತಾರೆ. ಇನ್ನು ಹೆಚ್ಚಿಗೆ ಹೇಳಿದರೆ ಸಿನಿಮಾದ ಸಾರಾಂಶವನ್ನು ಬಿಟ್ಟುಕೊಟ್ಟಂತೆ ಆಗುತ್ತದೆ. ಆದಕಾರಣ ದಯಮಾಡಿ ಎಲ್ಲರೂ ಚಿತ್ರಮಂದಿರಕ್ಕೆ ಬರಬೇಕೆಂದು ದಿಲೀಪ್ ಕುಮಾರ್ ಜೆ.ಆರ್ ಮಾಧ್ಯಮದವರನ್ನು ಕೋರಿಕೊಂಡರು. ಮುಗ್ದ ಹಾಗೂ ರುದ್ರನಾಗಿ ಎರಡು ಶೇಡ್‌ಗಳಲ್ಲಿ ಹರ್ಷವರ್ಧನ್ ನಾಯಕ. ಅದೇ ರೀತಿ ಜಂಬದಹುಡುಗಿ, ಮೃದು ಸ್ವಭಾವದವಳಾಗಿ ನಿಶ್ಚಿತಶೆಟ್ಟಿ ನಾಯಕಿ. ಉಳಿದಂತೆ ನಾಗೇಂದ್ರಅರಸು, ಬಲರಾಜವಾಡಿ, ಮಂಜುಪಾವಗಡ ಮುಂತಾದವರು ಅಭಿನಯಿಸಿದ್ದಾರೆ.



## ಶಿವರಾಜ್ ಕುಮಾರ್ ಕೈಜೋಡಿಸಿದ 'ಯುವ ಸರ್ಕಾರ್'

ಶ್ರೀಮತಿ ಪಾರ್ವತಮ್ಮ ರಾಜ್‌ಕುಮಾರ್ ಅವರ ತಂಗಿಯ ಪುತ್ರ ಸಂತೋಷ್ ಕುಮಾರ್ ಈ ಹಿಂದೆ ಬಿಂದಾಸ್ ಗೂಗ್ಲಿ, ಕ್ಯಾಂಪಸ್ ಕ್ರಾಂತಿ ಸೇರಿದಂತೆ 3 ಚಿತ್ರಗಳನ್ನು ನಿರ್ದೇಶಿಸಿದ್ದರು. ಇದೀಗ ಅವರು ಸದ್ದಿಲ್ಲದೆ ತಮ್ಮ ನಿರ್ದೇಶನದ 4ನೇ ಚಿತ್ರದ ಚಿತ್ರೀಕರಣ ಮುಗಿಸಿ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನು ಕೊನೇ ಹಂತಕ್ಕೆ ತಂದಿದ್ದಾರೆ. ಆ ಚಿತ್ರದ ಹೆಸರು ಯುವ ಸರ್ಕಾರ್. ತನ್ನ ಹಿಂದಿನ ಸಿನಿಮಾಗಳಂತೆ ಈ ಚಿತ್ರವನ್ನೂ ಸಹ ಸಂತೋಷ್ ಯೂಥ್ ಬೇಸ್ ಸಬ್ಜೆಕ್ಟ್ ಇಟ್ಟುಕೊಂಡೇ ಮಾಡಿದ್ದಾರೆ. ಇತ್ತೀಚೆಗಷ್ಟೇ ಚಿತ್ರದ ಟೀಸರ್‌ನ್ನು ವೀಕ್ಷಿಸಿ ಮೆಚ್ಚಿಕೊಂಡ ಶಿವಣ್ಣ ಸಂತೋಷ್ ನಮ್ಮ ಚಿಕ್ಕಮ್ಮನ ಮಗ, ಯುವ ಜನರಿಗೆ ಹತ್ತಿರವಾಗುವಂಥ ಒಂದೊಳ್ಳೆ ಸಿನಿಮಾ ಮಾಡಿದ್ದಾರೆ ಎಂದು ಶುಭ ಹಾರೈಸಿದರು. ಪ್ರೇಮಿಗಳ ದಿನದ ಅಂಗವಾಗಿ ಈ ಚಿತ್ರದ ರೊಮ್ಯಾಂಟಿಕ್ ಹಾಡನ್ನು ಹಿರಿಯ ನಿರ್ಮಾಪಕ ಎಸ್.ಎ.ಚಿನ್ನೇಗೌಡ್ರು ಹಾಗೂ ಎಸ್.ಎ.ಗೋವಿಂದರಾಜ್ ಬಿಡುಗಡೆ ಮಾಡಿ ಮಾತನಾಡುತ್ತ ಸಂತೋಷ್ ನಮ್ಮ ಕುಟುಂಬದವನು, ನನ್ನ ಪ್ರೀತಿಯ ತಂಗಿ ಮಗ, ಈಗಿನ ಹುಡುಗರಿಗೆ ಉತ್ತಮ ಸಂದೇಶ ಇಟ್ಟುಕೊಂಡು ಈ ಚಿತ್ರ ಮಾಡಿದ್ದಾನೆ. ಒಳ್ಳೇದಾಗಲಿ ಎಂದು ಶುಭ ಹಾರೈಸಿದರು. ನಂತರ ಚಿತ್ರದ ಟೀಸರನ್ನು ಭಾಮ ಹರೀಶ್, ಎ.ಗಣೇಶ್, ಮಾಧವಿ ಸೇರಿ ಬಿಡುಗಡೆ ಮಾಡಿದರು. ವೀರೇನ್ ಕೇಶವ್ ನಾಯಕನಾಗಿ ನಟಿಸಿದ್ದು, ನಾಯಕಿಯರಾಗಿ ಬಿಗ್ ಬಾಸ್ ಜಾಹ್ನವಿ, ಶೃತಿ ದೇಶಪಾಂಡೆ ಹಾಗೂ ಅಲ್ಫಿಯಾ ನಟಿಸಿದ್ದಾರೆ.



## ವಿಶ್ವವಿದ್ಯಾ ಗಣಪತಿ ದೇವಸ್ಥಾನದಲ್ಲಿ 'ಡೈರೆಕ್ಟರ್ಸ್ ಕಟ್'

ರಾಜೇಶ್ವರಿ ಎಂಟರ್ಪ್ರೈಸ್ ಲಾಂಛನದಲ್ಲಿ ಹೇಮಲತಾ ಬಿ.ಎಸ್ ಅವರು ನಿರ್ಮಿಸುತ್ತಿರುವ, ಭರತ್ ವಿ.ಜೆ ನಿರ್ದೇಶನದಲ್ಲಿ "ಮದುವೆಯ ಮಮತೆಯ ಕರೆಯೋಲೆ" ಚಿತ್ರದ ಖ್ಯಾತಿಯ ಸೂರಜ್ ಗೌಡ ನಾಯಕನಾಗಿ ನಟಿಸುತ್ತಿರುವ 'ಡೈರೆಕ್ಟರ್ಸ್ ಕಟ್' ಚಿತ್ರದ ಮುಹೂರ್ತ ಸಮಾರಂಭ ಕೆಂಗೇರಿಯ ವಿಶ್ವವಿದ್ಯಾ ಗಣಪತಿ ದೇವಸ್ಥಾನದಲ್ಲಿ ನೆರವೇರಿತು. ಅನೇಕ ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಮುಹೂರ್ತ ಸಮಾರಂಭದಲ್ಲಿ ಉಪಸ್ಥಿತರಿದ್ದರು. ನಂತರ ಚಿತ್ರತಂಡದ ಸದಸ್ಯರು ಚಿತ್ರದ ಕುರಿತು ಮಾತನಾಡಿದರು. ನಮ್ಮ ತಾಯಿ ಹೇಮಲತಾ ಅವರ ನಿರ್ಮಾಣದಲ್ಲಿ ಹಾಗೂ ನನ್ನ ನಿರ್ದೇಶನದಲ್ಲಿ 'ಡೈರೆಕ್ಟರ್ಸ್ ಕಟ್' ಅಂತ ಒಂದು ಸಿನಿಮಾ ಮಾಡುತ್ತಿದ್ದೀವಿ. ಈ ಸಿನಿಮಾದ ನಾಯಕನಾಗಿ ಸೂರಜ್ ಗೌಡ ಅವರು ಹಾಗೂ ನಾಯಕಿಯರಾಗಿ ರಾಧಾ ಎಸ್ ಭಾಗಿ ಮತ್ತು ದಿವ್ಯ ಜೈನ್ ಅಭಿನಯಿಸುತ್ತಿದ್ದಾರೆ. ಚಿತ್ರದ ಬಹುತೇಕ ಭಾಗದ ಚಿತ್ರೀಕರಣ ದೇವಭೂಮಿ ಎನಿಸಿರುವ ಉತ್ತರಾಖಂಡದಲ್ಲೇ ನಡೆಯುತ್ತದೆ. ಇದೊಂದು ಸಿನಿಮಾದೊಳಗಿನ ಸಿನಿಮಾ ಇರುವ ಕಥೆ. ಕನ್ನಡದ ನಿರ್ದೇಶಕನೊಬ್ಬ ಸಿನಿಮಾಗಾಗಿ ಉತ್ತರಾಖಂಡಕ್ಕೆ ಹೋದಾಗ ಅಲ್ಲಿ ಏನೆಲ್ಲಾ ಆಗುತ್ತದೆ ಎಂಬುದೇ ಕಥಾ ಸಾರಾಂಶ. ಸೂರಜ್ ಗೌಡ ಅವರು ನಿರ್ದೇಶಕನ ಪಾತ್ರದಲ್ಲಿ ಹಾಗೂ ರಾಧಾ ಎಸ್ ಭಾಗಿ ಅವರು ದಕ್ಷಿಣ ಭಾರತದ ನಾಯಕಿಯ ಪಾತ್ರದಲ್ಲಿ, ದಿವ್ಯ ಜೈನ್ ಅವರು ಉತ್ತರ ಭಾರತದ ನಾಯಕಿಯ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಪಿ.ಡಿ. ಸತೀಶ್, ಸ್ವಾತಿ ಮುಂತಾದವರು ತಾರಾಬಳಗದಲ್ಲಿದ್ದಾರೆ. ಪ್ರಮೋದ್ ಗೌಡ ಛಾಯಾಗ್ರಹಣ ಹಾಗೂ ಕಲ್ಯಾಣ್ ಮಂಜುನಾಥ್ ಅವರ ಸಂಗೀತ ನಿರ್ದೇಶನವಿರುವ ಈ ಚಿತ್ರಕ್ಕೆ ಪ್ರಮೋದ್ ಜೋಯಿಸ್ ಅವರು ಬರಹಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದೇ ಫೆಬ್ರವರಿ 25ರಿಂದ ಚಿತ್ರೀಕರಣ ಆರಂಭವಾಗಲಿದೆ.



## ಆಗಸ್ಟ್ 21ಕ್ಕೆ ನಾನಿ ನಟನೆಯ 'ದಿ ಪ್ಯಾರಡೈಸ್' ಬಿಡುಗಡೆ

ನ್ಯಾಚುರಲ್ ಸ್ಟಾರ್ ನಾನಿ ನಟಿಸುತ್ತಿರುವ ಪ್ಯಾನ್ ಇಂಡಿಯಾ ಸಿನಿಮಾ ದಿ ಪ್ಯಾರಡೈಸ್ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಆಗಸ್ಟ್ 21 ರಂದು ಚಿತ್ರ ವಿಶ್ವಾದ್ಯಂತ ಚಿತ್ರಮಂದಿರಕ್ಕೆ ಎಂಟ್ರಿ ಕೊಡಲಿದೆ. ದಿ ಪ್ಯಾರಡೈಸ್ ಸಿನಿಮಾದ ಶೂಟಿಂಗ್ ಸದ್ಯ ಭರದಿಂದ ಸಾಗುತ್ತಿದೆ. ನಾನಿಯವರ ಇಂಟ್ರೊಡಕ್ಷನ್ ಸಾಂಗ್ ಚಿತ್ರೀಕರಣ ನಡೆಯುತ್ತಿದೆ. ನೂರಾರು ಡ್ಯಾನ್ಸರ್ ಬೃಹತ್ ಸೆಟ್‌ನಲ್ಲಿ ಈ ಹಾಡಿಗೆ ಹೆಜ್ಜೆ ಹಾಕಲಿದ್ದಾರೆ. ರಾಕ್‌ಸ್ಟಾರ್ ಅನಿರುದ್ಧ್ ರವಿಚಂದರ್ ಸಂಗೀತ, ಸುಧನ್ ಮಾಸ್ಟರ್ ನೃತ್ಯ ಸಂಯೋಜನೆಯಲ್ಲಿ ಈ ಹಾಡು ತಯಾರಾಗುತ್ತಿದೆ. ದಸರಾ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದ ಶ್ರೀಕಾಂತ್ ಒಡೆಲಾ ಸಾರಥ್ಯದಲ್ಲಿ ದಿ ಪ್ಯಾರಡೈಸ್ ತಯಾರಾಗುತ್ತಿದೆ. ಚಿತ್ರದಲ್ಲಿ ಮೋಹನ್ ಬಾಬು, ರಾಘವ್ ಜುಯಾಲ್ ಮತ್ತು ಸಂಪೂರ್ಣೇಶ್ ಬಾಬು ಸೇರಿದಂತೆ ಅದ್ಭುತ ತಾರಾಗಣವನ್ನು ಒಳಗೊಂಡಿದೆ. ಈ ಹಿಂದೆ ದಸರಾ ಸಿನಿಮಾ ನಿರ್ಮಿಸಿದ್ದ ಸುಧಾಕರ್ ಚೆರುಕುರಿ ಮತ್ತೊಮ್ಮೆ ನಾನಿ ಹಾಗೂ ಶ್ರೀಕಾಂತ್ ಒಡೆಲಾಗೆ ಸಾಥ್ ಕೊಡುತ್ತಿದ್ದಾರೆ.



## ಭಕ್ತಿ ಮತ್ತು AI ತಂತ್ರಜ್ಞಾನದ ಸಂಗಮ

ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಹೊಂಬಾಳೆ ಫಿಲ್ಮ್ಸ್, ಮಹಾಶಿವರಾತ್ರಿಯ ಪ್ರಯುಕ್ತ 'ಶಿವ ಶಂಭೋ ಸ್ವಯಂಭೋ' ಎಂಬ ನವೀನ ಭಕ್ತಿಗೀತೆಯನ್ನು ಬಿಡುಗಡೆ ಮಾಡುವ ಮೂಲಕ ಅಧಿಕೃತವಾಗಿ ಸಂಗೀತ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿದೆ. ಸಂಗೀತದ ನಾವೀನ್ಯತೆ: ಪೂಜ್ಯ ಸ್ವಾಮಿ ದಯಾನಂದ ಸರಸ್ವತಿ ಅವರ ಮೂಲ ಸಾಹಿತ್ಯಕ್ಕೆ, ನಾರಾಯಣ ಶರ್ಮ ಮತ್ತು ಸಚಿನ್ ಬಾಗ್ಲಿ ಅವರು ಸಮಕಾಲೀನ ಶೈಲಿಯಲ್ಲಿ ಸಂಗೀತ ಸಂಯೋಜಿಸಿದ್ದಾರೆ. AI ತಂತ್ರ ಜ್ಞಾನದ ಬಳಕೆ: ಈ ಹಾಡಿನ ದೃಶ್ಯ ವೈಭವವನ್ನು ಹೊಂಬಾಳೆ ಸಂಸ್ಥೆಯ ಆಂತರಿಕ ವಿಎಫ್‌ಎಕ್ಸ್ ವಿಭಾಗವಾದ 'ಅಸ್ತ್ರ ಸ್ಟುಡಿಯೋ' ಸಂಪೂರ್ಣವಾಗಿ AI (ಕೃತಕ ಬುದ್ಧಿಮತ್ತೆ) ತಂತ್ರಜ್ಞಾನ ಬಳಸಿ ಸಿದ್ಧಪಡಿಸಿದೆ. ವ್ಯಾಪಕ ಪ್ರತಿಕ್ರಿಯೆ: ಬಿಡುಗಡೆಗೆ ಮುನ್ನವೇ ಈ ಹಾಡಿನ ಪ್ರೋಮೋ ಡಿಜಿಟಲ್ ಪ್ಲಾಟ್ ಫಾರ್ಮ್‌ಗಳಲ್ಲಿ 6 ಮಿಲಿಯನ್‌ಗೂ ಹೆಚ್ಚು ವೀಕ್ಷಣೆ ಪಡೆದು ದಾಖಲೆ ಬರೆದಿದೆ. ಹೊಸ ಮೈಲಿ ಗಲ್ಲು: ಕೇವಲ ಸಿನಿಮಾಗಳಿಗೆ ಸೀಮಿತವಾಗದೆ, ಸಮಗ್ರ ಮನರಂಜನಾ ವ್ಯವಸ್ಥೆ ನಿರ್ಮಿಸುವ ಉದ್ದೇಶದಿಂದ ಹೊಂಬಾಳೆ ಫಿಲ್ಮ್ಸ್ ಹೊಸ ಹೆಜ್ಜೆ ಇಟ್ಟಿದೆ.



## ಸಿಯೋನ್ ಆಗಿ ಬಂದ ಅಮರನ್ ಹೀರೋ

ತಮಿಳು ಚಿತ್ರರಂಗದ ಸೂಪರ್ ಸ್ಟಾರ್ ಕಮಲ್ ಹಾಸನ್ ಹಾಗೂ ಶಿವಕಾರ್ತಿಯೇನ್ ಮತ್ತೊಮ್ಮೆ ಕೈ ಜೋಡಿಸಿದ್ದಾರೆ. ಈ ಹಿಂದೆ ಕಮಲ್ ನಿರ್ಮಿಸಿದ್ದ ಅಮರನ್ ಸೂಪರ್ ಹಿಟ್ ಕಂಡಿತ್ತು. ಈ ಚಿತ್ರದಲ್ಲಿ ಶಿವಕಾರ್ತಿಕೇಯನ್ ನಾಯಕನಾಗಿ ನಟಿಸಿದ್ದರು. ಇದೀಗ ಈ ಜೋಡಿ ಸಿಯೋನ್ ಎಂಬ ಸಿನಿಮಾಗಾಗಿ ಮತ್ತೆ ಒಂದಾಗಿದ್ದಾರೆ. ರಾಜ್‌ಕಮಲ್ ಇಂಟರ್ನ್ಯಾಷನಲ್ ಹಾಗೂ ಟರ್ಮರಿಕ್ ಮೀಡಿಯಾ ಬ್ಯಾನರ್‌ನಡಿ ಕಮಲ್ ಹಾಸನ್ ಹಾ ಗೂ ಆರ್.ಮಹೇಂದ್ರನ್ ನಿರ್ಮಾಣದಲ್ಲಿ ಸಿಯೋನ್ ಸಿನಿಮಾ ಮೂಡಿ ಬರ್ತಿದೆ. ಶಿವಕಾರ್ತಿಕೇಯನ್ ಹುಟ್ಟುಹಬ್ಬದ ವಿಶೇಷವಾಗಿ ಗ್ಲಿಂಪ್ಸ್ ಬಿಡುಗಡೆ ಮಾಡಲಾಗಿದೆ. ಹಣೆಯಲ್ಲಿ ವಿಭೂತಿ ಧರಿಸಿ, ಕೈಯಲ್ಲಿ ಕತ್ತಿ ಹಿಡಿದು ಶಿವಕಾರ್ತಿಕೇಯನ್ ಮಾಸ್ ಅವತಾರ ತಾಳಿದ್ದಾರೆ. ಥಾಯ್ ಕಿಝುವಿ ಸಿನಿಮಾ ನಿರ್ದೇಶಿಸಿರುವ ಶಿವಕುಮಾರ್ ಮುರುಗೇಶನ್ ಸಿಯೋನ್‌ಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಸಂತೋಷ್ ನಾರಾಯಣ್ ಸಂಗೀತ, ವಿವೇಕ್ ವಿಜಯಕುಮಾರ್ ಛಾಯಾಗ್ರಹಣ, ಸ್ಯಾನ್ ಲೋಕೇಶ್ ಸಂಕಲನ ಚಿತ್ರಕ್ಕಿದೆ. ಇದೇ ವರ್ಷ ಅಕ್ಟೋಬರ್ ತಿಂಗಳಲ್ಲಿ ಬಿಡುಗಡೆ ಮಾಡಲು ಯೋಜನೆ ಹಾಕಿಕೊಂಡಿದೆ.



## ಕಿಚ್ಚ ಸುದೀಪ್ ಮಗಳ ಕಂಠಕ್ಕೆ ಸಲ್ಮಾನ್ ಖಾನ್ ಫಿದಾ

ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಟನೆಯ ಮಾರ್ಕ್ ಸಿನಿಮಾ ಸೂಪರ್ ಸಕ್ಸಸ್ ಕಂಡಿದೆ. ಅದರಲ್ಲೂ ಚಿತ್ರದ ಮಸ್ತ್ ಮಲೈಕಾ ಹಾಡು ಸಖತ್ ಕ್ರೇಜ್ ಕ್ರಿಯೇಟ್ ಮಾಡಿದೆ. ಮಿಲಿಯನ್ ಗಟ್ಟಲೇ ವೀವ್ಸ್ ಕಂಡಿರುವ ಈ ಗೀತೆಗೆ ಧ್ವನಿಯಾದವರು ಕಿಚ್ಚನ ಮುದ್ದಿನ ಪುತ್ರಿ ಸಾನ್ವಿ ಸುದೀಪ್. ಸಾನ್ವಿ ಸುದೀಪ್ ಕಂಠ ಕಾಣಿಸಿರುವ ಮಸ್ತ್ ಮಲೈಕಾ ಹಾಡನ್ನು ಬಾಲಿವುಡ್ ಭಾಯಿಜಾನ್ ಮೆಚ್ಚಿಕೊಂಡಿದ್ದಾರೆ. ಸಲ್ಮಾನ್ ಖಾನ್ ಹಾಡಿನ ಲಿಂಕ್? ಅನ್ನು ಇನ್? ಸ್ಟಾಗ್ರಾಮ್ ಸ್ಟೋರಿಯಲ್ಲಿ ಪೋಸ್ಟ್ ಮಾಡಿದ್ದಾರೆ. 'ಸುಂದರವಾದ ಹಾಡು, ಒಳ್ಳೆಯದಾಗಲಿ' ಎಂದು ಸಲ್ಲು ಬರೆದುಕೊಂಡಿದ್ದಾರೆ. ಈ ಸ್ಟೋರಿಯಲ್ಲಿ ಕಿಚ್ಚ ಸುದೀಪ್ ಹಾಗೂ ಸಾನ್ವಿಯನ್ನು ಟ್ಯಾಗ್ ಮಾಡಿದ್ದಾರೆ. ಸಲ್ಮಾನ್ ಖಾನ್ ಕೊಟ್ಟ ಈ ಮೆಚ್ಚುಗೆಗೆ ಸಾನ್ವಿ ಫುಲ್ ಖುಷ್ ಆಗಿದ್ದಾರೆ. 'ಎಂತಹ ಅದ್ಭುತ ಗೌರವ. ಧನ್ಯವಾದಗಳು ಸಲ್ಮಾನ್ ಸರ್' ಎಂದು ಸಾನ್ವಿ ತಮ್ಮ ಸ್ಟೋರಿಯಲ್ಲಿ ಹಂಚಿಕೊಂಡಿದ್ದಾರೆ. ಸಲ್ಲು ಹಾಗೂ ಕಿಚ್ಚ ಸುದೀಪ್ ಆಪ್ತ ಗೆಳೆಯರು. ಇವರಿಬ್ಬರೂ ದ ಬಾಂಗ್ 3 ಚಿತ್ರದಲ್ಲಿ ಒಟ್ಟಿಗೆ ನಟಿಸಿದ್ದರು. ಸಲ್ಮಾನ್ ಹಾ ಗೂ ಸುದೀಪ್ ಎರಡು ಕುಟುಂಬದ ನಡುವೆ ಒಳ್ಳೆ ಒಡನಾಟವಿದೆ.



## ಶ್ರೀ ಕಾಕಾ ನಿರ್ದೇಶನ ಹಾಗೂ ನಟನೆಯ 'ಅನಂತ ಪಯಣ'

ಕನ್ನಡದಲ್ಲಿ ಈಗ ಕಂಟೆಂಟ್ ಓರಿಯಂಟೆಡ್ ಚಿತ್ರಗಳೆ ಹೆಚ್ಚಾಗಿ ಬರುತ್ತಿದೆ. ಹೊಸತಂಡದ ಹೊಸಪ್ರಯತ್ನವನ್ನು ಜನರು ಮೆಚ್ಚಿಕೊಳ್ಳುತ್ತಿದ್ದಾರೆ. ಅಂತಹುದೇ ಹೊಸತಂಡದ ಹೊಸ ಪ್ರಯತ್ನ 'ಅನಂತ ಪಯಣ'. ನೃತ್ಯ ಕಲಾವಿದನಾಗಿ, ಸಹ ನಿರ್ದೇಶಕನಾಗಿ ಕಾರ್ಯನಿರ್ವಹಿಸಿ ಅನುಭವವಿರುವ ಶ್ರೀ ಕಾಕಾ, 'ಅನಂತ ಪಯಣ'ದ ಮೂಲಕ ನಾಯಕನಾಗಿ ಹಾಗೂ ನಿರ್ದೇಶಕನಾಗಿ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದಾರೆ. ಎಸ್.ಕೆ. ಫಿಲಂಸ್ ಫ್ಯಾಕ್ಟರಿ ಲಾಂಛನದಲ್ಲಿ ಸಂತೋಷ್ ಅಶೋಕ್ ಹೆಗಡೆ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. 'ಅನಂತ ಪಯಣ', ಇದು ಸಂಚಾರಿ ಕುರುಬರ ಕುರಿತಾದ ಕಥಾ ಹಂದರ ಹೊಂದಿರುವ ಚಿತ್ರ. 'ಸಂಚಾರಿ ಕುರುಬರು' ಸ್ಥಿರವಾದ ಮನೆ ಹೊಂದಿರದೆ, ಋತು ಮಾನಕ್ಕೆ ಅನುಗುಣವಾಗಿ ಕುರಿಗಳೊಂದಿಗೆ ನೂರಾರು ಕಿ.ಮೀ.ಸಂಚರಿಸುತ್ತಾರೆ. ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ಕಥೆ ಇದು.



## ಉತ್ತರ ಕರ್ನಾಟಕದಲ್ಲಿ 'ಕನಕರಾಜ'ನ ಸಂಚಾರ

ಸುಕೃತಿ ಚಿತ್ರಾಲಯ ಲಾಂಛನದಲ್ಲಿ ಎಸ್ ಆರ್ ಸನತ್ ಕುಮಾರ್ ಅವರು ನಿರ್ಮಿಸುತ್ತಿರುವ, ಡಾ॥ವಿ.ನಾಗೇಂದ್ರಪ್ರಸಾದ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಸಂಗೀತ ಸಂಯೋಜನೆಯನ್ನು ಮಾಡುತ್ತಿರುವ ಹಾಗೂ ಆರ್ ರವೀಂದ್ರ ನಿರ್ದೇಶನದ 'ಕನಕರಾಜ' ಚಿತ್ರದ ಎರಡನೇ ಹಂತದ ಚಿತ್ರೀಕರಣ ಬೆಳಗಾವಿ, ಗೋಕಾಕ್ ಮುಂತಾದ ಕಡೆ ಬಿರುಸಿನಿಂದ ಸಾಗಿದೆ. ಹದಿನೈದು ದಿನಗಳ ಕಾಲ ಮಾತಿನ ಭಾಗ, ಸಾಹಸ ಸನ್ನಿವೇಶಗಳು ಹಾಗೂ ಹಾಡುಗಳ ಚಿತ್ರೀಕರಣ ನಡೆಯಲಿದೆ. ನಾಯಕ ಅನೂಪ್ ರೇವಣ್ಣ, ನಾಯಕಿ ನಿಮಿಷ, ಖಳ ನಟ ಮಂಜುನಾಥ್ ಅರಸ್ ಮುಂತಾದವರು ಈ ಭಾಗದ ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. ಮೊದಲ ಭಾಗದ ಚಿತ್ರೀಕರಣ ಬೆಂಗಳೂರಿನಲ್ಲಿ ನಡೆದಿದೆ. 'ಕನಕರಾಜ' ಇದು ಮುಖ್ಯಮಂತ್ರಿಗಳ ಅಭಿಮಾನಿಯ ಕಥೆ. "FAN OF CM" ಎಂಬ ಅಡಿಬರಹ ಕೂಡ ಇದೆ. ಈ ಚಿತ್ರಕ್ಕೆ ಪ್ರಮೋದ್ ಭಾರತೀಯ ಛಾಯಾಗ್ರಹಣ, ಕೆ.ಎಂ. ಪ್ರಕಾಶ್ ಸಂಕಲನ, ಥ್ರಿಲ್ಲರ್ ಮಂಜು ಸಾಹಸ ನಿರ್ದೇಶನ ಹಾಗೂ ಧನಂಜಯ ಅವರ ನೃತ್ಯ ನಿರ್ದೇಶನವಿದೆ.






## ಮಹಾ ಶಿವರಾತ್ರಿಗೆ ಗಣೇಶ್ ಚಿತ್ರದ ಮುಹೂರ್ತ..



ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಸೆಳೆದಿರುವ ಗೋಲ್ಡನ್ ಸ್ಟಾರ್ ಗಣೇಶ್ ನಾಯಕರಾಗಿ ನಟಿಸುತ್ತಿರುವ ಹಾಗೂ "ಹೊಂದಿಸಿ ಬರೆಯಿರಿ", "ತೀರ್ಥ ರೂಪ ತಂದೆಯವರಿಗೆ" ಚಿತ್ರದ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ ಕಾಂಬಿನೇಶನ್‌ನಲ್ಲಿ ಮೂಡಿಬರುತ್ತಿರುವ ವೈಷ್ಣವಿ ಫಿಲಂಸ್ ಮೂಲಕ ವಿಜಯ್ ಲೋಹಿತ್ ನಿರ್ಮಿಸುತ್ತಿರುವ, ಸತೀಶ್ ಎಚ್ ಗೌಡ ಅವರ ಸಹ ನಿರ್ಮಾಣವಿರುವ ಶೀರ್ಷಿಕೆಯಿಂದಲೇ ಎಲ್ಲರ ಗಮನ ಸೆಳೆದಿರುವ "ತಮ್ಮ ಸುಖಾಗಮನ ಬಯಸುವ" ಚಿತ್ರದ ಮುಹೂರ್ತ ಸಮಾರಂಭ ಮಾಹಾ ಶಿವರಾತ್ರಿಯ ಶುಭದಿನದಂದು ಕಂಠೀರವ ಸ್ಟುಡಿಯೋದಲ್ಲಿ ನೆರವೇರಿತು. ಶಿಲ್ಪ ಗಣೇಶ್ ಅವರು ಆರಂಭ ಫಲಕ ತೋರುವ ಮೂಲಕ ಚಿತ್ರಕ್ಕೆ ಚಾಲನೆ ನೀಡಿದರು. ಚಿತ್ರತಂಡದ ಸದಸ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಫೆ. 20ರಂದು "ಸರಳ ಸುಬ್ಬರಾವ್" ತೆರೆಗೆ



1971ರ ಕಾಲಘಟ್ಟದ ಸುಂದರ ಕೌಟುಂಬಿಕ ಕಥಾಹಂದರ ಹೊಂದಿರುವ ಹಾಗೂ ಖ್ಯಾತ ಲೇಖಕಿ ತ್ರಿವೇಣಿ ಅವರ ಕಾದಂಬರಿ ಆಧರಿಸಿರುವ ಚಿತ್ರ "ಸರಳ ಸುಬ್ಬರಾವ್". ರಿಯಾನ್ ಕ್ರಿಯೇಷನ್ಸ್ ಲಾಂಛನದಲ್ಲಿ ಲೋಹಿತ್ ನಂಜುಂಡಯ್ಯ ನಿರ್ಮಿಸಿರುವ, ಮಂಜು ಸ್ವರಾಜ್ ನಿರ್ದೇಶನದಲ್ಲಿ ಅಜೇಯ್ ರಾವ್ ಹಾಗೂ ಮಿಶಾ ನಾರಂಗ್ ನಾಯಕ, ನಾಯಕಿಯಾಗಿ ನಟಿಸಿರುವ "ಸರಳ ಸುಬ್ಬರಾವ್" ಚಿತ್ರ ಫೆಬ್ರವರಿ 20ರಂದು ತೆರೆಗೆ ಬರುತ್ತಿದೆ. ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳಿಗೆ ಮೆಚ್ಚುಗೆ ವ್ಯಕ್ತವಾಗಿದೆ. ಅಜನೀಶ್ ಲೋಕನಾಥ್ ಸಂಗೀತ ನೀಡಿರುವ ಈ ಚಿತ್ರಕ್ಕೆ ಪ್ರದೀಪ್ ಪದ್ಮಕುಮಾರ್ ಅವರ ಛಾಯಾಗ್ರಹಣವಿದೆ. ಬಸವರಾಜ ಅರಸ್ ಸಂಕಲನ, ಅಮರ್ ಕಲಾ ನಿರ್ದೇಶನ ಹಾಗೂ ಮದನ್ – ಹರಿಣಿ ಅವರ ನೃತ್ಯ ನಿರ್ದೇಶನ ಈ ಚಿತ್ರಕ್ಕಿದೆ.

## ಮಳೆ ಹೊಯ್ಯುತ್ತಿದೆ ಹಾಡುಗಳು..

'ಮತ್ತೆ ಮಳೆ ಹೊಯ್ಯುತ್ತಿದೆ' ಸಿನಿಮಾದ ಎರಡು ಹಾಡುಗಳ ಬಿಡುಗಡೆ ಸಮಾರಂಭವು ಉತ್ಸವ್ ಲೆಗಸಿದಲ್ಲಿ ಅದ್ದೂರಿಯಾಗಿ ನಡೆಯಿತು. 'ಎಲ್ಲ ನೆನಪಾಗುತಿದೆ' ಎಂಬ ಅಡಿ ಬರಹವಿದೆ. ಮೂರು ದಶಕಗಳಿಂದ ಸಹಾಯಕ ಕಲಾ ನಿರ್ದೇಶಕರಾಗಿರುವ ಗಂಗಾಧರ್ ಶ್ರೀ ಗವಿರಂಗನಾಥ ಸ್ವಾಮಿ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಪತ್ನಿ ಸುಮ ಹೆಸರಿನಲ್ಲಿ ಬಂಡವಾಳ ಹೂಡುತ್ತಿದ್ದಾರೆ. ಶೃತಿ ಅನಿಲ್‌ಕುಮಾರ್ ಸಹ ನಿರ್ಮಾಪಕರು ಹಾಗೂ ಪ್ರಾಧ್ಯಾಪಕರ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಹಲವು ವರ್ಷಗಳಿಂದ ಸಿನಿಮಾರಂಗದಲ್ಲಿ ಸಕ್ರಿಯರಾಗಿರುವ ಪರಮ್‌ಗುಬ್ಬಿ ನಿರ್ದೇಶನ ಮಾಡಿದ್ದಾರೆ. ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಕಬ್ಬಡಿ ನರೇಂದ್ರಬಾಬು, ಸಂಗೀತ ಅತಿಶಯ ಜೈನ್ ಅವರದಾಗಿದೆ. ಶ್ರವಣಬೆಳಗೊಳ ಶಾಸಕ ಸಿ.ಎನ್.ಬಾಲಕೃಷ್ಣ ಮತ್ತು ಹಿರಿಯ ನಿರ್ದೇಶಕ ನಾಗಣ್ಣ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಾಗಣ್ಣ ಪ್ರಸ್ತುತ ಚಿತ್ರರಂಗವು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಿದರು.



## 'ಪಬ್ಬಾರ್'ಗೆ ಅಯ್ಯಪ್ಪ ಹೊಸ ಲುಕ್

ಗೀತಾ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಗೀತಾ ಶಿವರಾಜ್ ಕುಮಾರ್ ನಿರ್ಮಿಸುತ್ತಿರುವ ಸಿನಿಮಾ ಪಬ್ಬಾರ್. ಚಿತ್ರದಲ್ಲಿ ಧೀರೇನ್ ರಾಮ್ ಕುಮಾರ್ ನಾಯಕನಾಗಿ, ಅಮೃತಾ ಪ್ರೇಮ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಶಾಖಾಹಾರಿ ನಿರ್ದೇಶಕ ಸಂದೀಪ್ ಸುಂಕದ್ ಸಾರಥ್ಯದಲ್ಲಿ ಮೂಡಿ ಬರ್ತಿರುವ ಪಬ್ಬಾರ್ ಚಿತ್ರದಲ್ಲಿ ಅಯ್ಯಪ್ಪ ಪಿ ಶರ್ಮ ಖಡಕ್ ಪೊಲೀಸ್ ಆಫೀಸರ್ ಆಗಿ ನಟಿಸುತ್ತಿದ್ದಾರೆ. ಅದಕ್ಕಾಗಿ ಅವರು ಹೊಸ ಅವತಾರ ತಾಳಿದ್ದಾರೆ. ಅಯ್ಯಪ್ಪ ಉದ್ದ ಗಡ್ಡ ಬಿಟ್ಟು ತಮ್ಮ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತಿದ್ದ ಅಯ್ಯಪ್ಪ ಪಿ ಶರ್ಮ ಪಬ್ಬಾರ್ ಸಿನಿಮಾದ ಪಾತ್ರಕ್ಕಾಗಿ ಗಡ್ಡಕ್ಕೆ ಕತ್ತರಿ ಹಾಕಿಸಿಕೊಂಡಿದ್ದಾರೆ. ಮಯೂರ್ ಅಂಬೇಕಲ್ಲು ಸಂಗೀತ, ವಿಶ್ವಜಿತ್ ರಾವ್ ಕ್ಯಾಮರಾವರ್ಕ್ ಚಿತ್ರಕ್ಕಿದೆ. ಅಚ್ಯುತ್ ಕುಮಾರ್, ಗೋಪಾಲಕೃಷ್ಣ ದೇಶಪಾಂಡೆ, ಹಿರಿಯ ನಟ ರಾಮಕೃಷ್ಣ, ಭರತ್ ಜಿಬಿ, ಶ್ರೀಹರ್ಷ ಗೋಭಟ್ ತಾರಾ ಬಳಗದಲ್ಲಿದ್ದಾರೆ. ಪಬ್ಬಾರ್ ಕ್ರೈಂ, ಅಡ್ವೆಂಚರಸ್ ಥ್ರಿಲ್ಲರ್ ಸಿನಿಮಾವಾಗಿದೆ.



## ಶಿವನ ಹಾಡಿನೊಂದಿಗೆ ಚಿತ್ರದ ಪ್ರಚಾ

ರಂಗಭೂಮಿ ಹಿನ್ನೆಲೆ ಇರುವ ರಂಗಸ್ವಾಮಿ ಕಪಿನಿಪಾಳ್ಯ ನಿರ್ದೇಶನದ, ಹಿತ ಆರ್ ಗೌಡ ನಿರ್ಮಾಣದ "ಸರ್ವಾಂತರ್ಯಾಮಿ" ಎಲ್ಲರ ಕೈಯಲ್ಲೂ ನಾನೇ ಸ್ವಾಮಿ' ಚಿತ್ರದ ಚಿತ್ರೀಕರಣ ಸದ್ದಿಲ್ಲದೆ ಪೂರ್ಣಗೊಂಡಿದೆ. ಚಿತ್ರಕ್ಕೆ ನಿರ್ದೇಶಕ ಹಾಗು ಗೀತರಚನೆಕಾರ ಕೆ.ರಾಮ್ ನಾರಾಯಣ್ ಬೆನ್ನೆಲುಬಾಗಿ ನಿಂತಿದ್ದಾರೆ ಶಿವರಾತ್ರಿಯ ಹಿನ್ನೆಲೆಯಲ್ಲಿ ಶಿವನ ಬಗ್ಗೆ ನಿರ್ದೇಶಕ ರಂಗಸ್ವಾಮಿ ಅವರೆ ಬರೆದಿರುವ ಶಿವನ ಕುರಿತಾದ ಹಾಡನ್ನು ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಪ್ರಚಾರ ಕಾರ್ಯ ಆರಂಭಿಸಿದೆ. ಶಿವ ತಾಂಡವದ ಈ ಗೀತೆಗೆ ರಮೇಶ್ ಕೃಷ್ಣ ಸಂಗೀತ ನೀಡಿದ್ದು, ರಂಗಸ್ವಾಮಿ ಕಪನಿಪಾಳ್ಯ ಹಾಗೂ ಸಂಜನಾ ಅಭಿನಯಿಸಿದ್ದಾರೆ. ಹಾಡಿಗೆ ಮೆಚ್ಚುಗೆ ವ್ಯಕ್ತವಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಛಾಯಾಗ್ರಾಹಕ ರಾಜು ಹೆಮ್ಮಿಗೆಪುರ, ಕಲಾವಿದರಾದ ವಿಕ್ಟರಿ ವಾಸು, ಮೈರಾ, ಅಮೂಲ್ಯ ನಾರಾಯಣ್,ಉಮೇಶ್ ಸಕ್ಕರೆನಾಡು, ಉಮೇಶ್ ಉಪಸ್ಥಿತರಿದ್ದರು.









KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021